ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 125 | ರಾಯಚೂರು Raichur 27-10-2026 | ಮಂಗಳವಾರ Tuesday | ಪುಟ: Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685




# ಯುವಕರು ಮಹರ್ಷಿ ವಾಲ್ಮೀಕಿ ಅವರ ಜೀವನ ಚರಿತ್ರೆಯಿಂದ ಸ್ಫೂರ್ತಿ ಪಡೆಯಲಿ: ಎಸ್ಪಿ ಅರುಣಾಂಗ್ಷು ಗಿರಿ

ರಾಯಚೂರು, ಅ. 26: ಯುವಜನತೆ ದುಶ್ಚಟಗಳಿಂದ ದೂರವಿದ್ದು, ಮಹರ್ಷಿ ವಾಲ್ಮೀಕಿ ಅವರ ಜೀವನ ಚರಿತ್ರೆ ಹಾಗೂ ಆದರ್ಶಗಳಿಂದ ಸ್ಫೂರ್ತಿ ಪಡೆದು ಉತ್ತಮ ಬದುಕು ರೂಪಿಸಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಕರೆ ನೀಡಿದರು.

ಸೋಮವಾರ ನಗರದ ಆಶಾಪುರ ರಸ್ತೆಯ ವಾಲ್ಮೀಕಿ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹರ್ಷಿ ವಾಲ್ಮೀಕಿ ಅವರು ಹಲವು ವರ್ಷಗಳ ಕಾಲ ಕಠಿಣ ತಪಸ್ಸಿನಲ್ಲಿ ನಿರತರಾಗಿದ್ದಾಗ ನಾರದ ಮುನಿಗಳು ದರ್ಶನ ನೀಡಿದರು. ಬಳಿಕ 'ಮರಾ' ಎಂಬ ಮಂತ್ರವನ್ನು ಜಪಿಸುತ್ತಾ 'ರಾಮ' ನಾಮವನ್ನು ಸಿದ್ಧಿಸಿಕೊಂಡು ರಾಮಾಯಣ ಮಹಾಕಾವ್ಯವನ್ನು ರಚಿಸಿದರು. ಏಳು ಕಾಂಡಗಳಲ್ಲಿ 24 ಸಾವಿರ ಶ್ಲೋಕಗಳನ್ನು ಒಳಗೊಂಡಿರುವ ರಾಮಾಯಣವು ಭಾರತದ ಅತ್ಯಂತ ಪವಿತ್ರ ಗ್ರಂಥಗಳಲ್ಲಿ ಒಂದಾಗಿದೆ ಎಂದು ತಿಳಿಸಿದರು.






ಇಂತಹ ಮಹಾನ್ ವ್ಯಕ್ತಿಯ ಜಯಂತಿಯನ್ನು ಆಚರಿಸುತ್ತಿರುವುದು ನಮ್ಮೆಲ್ಲರ ಭಾಗ್ಯವಾಗಿದೆ. ಇತ್ತೀಚಿನ ದಿನಗಳಲ್ಲಿ ಜಿಲ್ಲೆಯ ಯುವಜನರಲ್ಲಿ ಮದ್ಯಪಾನ ಹಾಗೂ ಮಾದಕ ವಸ್ತುಗಳ ಸೇವನೆ ಹೆಚ್ಚುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಇಂತಹ ದುಶ್ಚಟಗಳಿಂದ ದೈಹಿಕ ಹಲ್ಲೆ, ಗುಂಪು ಘರ್ಷಣೆ ಸೇರಿದಂತೆ ವಿವಿಧ ಅಹಿತಕರ ಘಟನೆಗಳು ನಡೆಯುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಯುವಕರು ಮದ್ಯಪಾನ ಮತ್ತು ಮಾದಕ ವಸ್ತುಗಳ ಸೇವನೆಯಿಂದ ದೂರವಿದ್ದು, ಕ್ರೀಡೆ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಮಹರ್ಷಿ ವಾಲ್ಮೀಕಿ ಅವರು ಧನುರ್ವಿದ್ಯೆಯಲ್ಲಿ ಆಸಕ್ತಿ ಹೊಂದಿದ್ದಂತೆ ಯುವಕರು ಯಾವುದಾದರೂ ಒಂದು ಕ್ರೀಡೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು. ಉತ್ತಮ ಶಿಕ್ಷಣ ಪಡೆದು ಆರ್ಥಿಕ, ಸಾಮಾಜಿಕ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವ ಮೂಲಕ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.

ರಾಯಚೂರು ಜಿಲ್ಲೆಯಲ್ಲಿ ಹೆಲ್ಮೆಟ್ ಧರಿಸುವವರ ಸಂಖ್ಯೆ ಕಡಿಮೆಯಿದ್ದು, ಹೆಲ್ಮೆಟ್ ಇಲ್ಲದೆ ದ್ವಿಚಕ್ರ ವಾಹನ ಚಲಾಯಿಸುವುದರಿಂದ ಸಂಭವಿಸುವ ಅಪಘಾತಗಳಲ್ಲಿ ಪ್ರಾಣ ಕಳೆದುಕೊಳ್ಳುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಪ್ರತಿಯೊಬ್ಬ ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಸಂಚಾರ ನಿಯಮಗಳನ್ನು ಪಾಲಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಡಾ. ಬಸವರಾಜ ಅವರು, ರಾಯಚೂರು ವಿಶ್ವವಿದ್ಯಾಲಯಕ್ಕೆ ಮಹರ್ಷಿ ವಾಲ್ಮೀಕಿ ಅವರ ಹೆಸರಿಡಲಾಗಿದ್ದು, ವಿಶ್ವವಿದ್ಯಾಲಯದಲ್ಲಿ ವಾಲ್ಮೀಕಿ ಅಧ್ಯಯನ ಪೀಠವನ್ನು ಸ್ಥಾಪಿಸುವ ಅಗತ್ಯವಿದೆ. ಇದರಿಂದ ಮಹರ್ಷಿ ವಾಲ್ಮೀಕಿ ಅವರ ಜೀವನ, ಸಾಹಿತ್ಯ, ಚಿಂತನೆ ಹಾಗೂ ಸಮುದಾಯದ ಇತಿಹಾಸದ ಕುರಿತು ಸಂಶೋಧನೆ ಮತ್ತು ಅಧ್ಯಯನ ನಡೆಸಲು ಹೆಚ್ಚಿನ ಅವಕಾಶ ದೊರೆಯಲಿದೆ ಎಂದು ಅಭಿಪ್ರಾಯಪಟ್ಟರು.

ಮಹರ್ಷಿ ವಾಲ್ಮೀಕಿ ಅವರು ಮಾನವೀಯತೆ, ಕರುಣೆ ಹಾಗೂ ಮನುಷ್ಯತ್ವದ ಮಹತ್ವವನ್ನು ಪ್ರತಿಪಾದಿಸಿದ್ದಾರೆ. ಅವರ ವಿಚಾರಧಾರೆಗಳು ಸಮಾಜಕ್ಕೆ ಸದಾ ಮಾರ್ಗದರ್ಶಕವಾಗಿವೆ ಎಂದು ಹೇಳಿದರು.

ವಾಲ್ಮೀಕಿ ಸಮುದಾಯದ ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ, ಶೈಕ್ಷಣಿಕ ಪ್ರೋತ್ಸಾಹಧನ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಸರಳ ವಿವಾಹಗಳಿಗೆ ಪ್ರೋತ್ಸಾಹಧನ, ಸ್ವಯಂ ಉದ್ಯೋಗ ಆರಂಭಿಸಲು ಸಾಲ ಸೌಲಭ್ಯಗಳು ಲಭ್ಯವಿವೆ. ಅರಣ್ಯ ಹಕ್ಕುಗಳ ಕಾಯ್ದೆಯಡಿ ಅರ್ಹ ಭೂಹೀನರಿಗೆ ಭೂಮಿಯ ಹಕ್ಕು ಪಡೆಯಲು ಅವಕಾಶಗಳಿವೆ. ಸಮುದಾಯದವರು ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿ ಪಡೆದು ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಮಾಜದ ಎಸ್ಸೆಸ್ಸೆಲ್ಸಿ, ಪಿಯುಸಿ, ಪದವಿ ಹಾಗೂ ಸ್ನಾತಕೋತ್ತರ ಪದವಿ ವ್ಯಾಸಂಗದಲ್ಲಿ ಉತ್ತಮ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗಣ್ಯರು ಸನ್ಮಾನಿಸಿ ಗೌರವಿಸಿದರು.

ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಮೀಪವಿರುವ ಮಹರ್ಷಿ ವಾಲ್ಮೀಕಿ ಅವರ ಪ್ರತಿಮೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಹಾಗೂ ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ ಅವರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಬಳಿಕ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಯು ಬಸವೇಶ್ವರ ವೃತ್ತ, ಡಾ. ಬಿ.ಆರ್. ಅಂಬೇಡ್ಕರ್ ವೃತ್ತ, ರೈಲ್ವೆ ನಿಲ್ದಾಣ ಹಾಗೂ ಆಶಾಪುರ ರಸ್ತೆ ಮಾರ್ಗವಾಗಿ ವಾಲ್ಮೀಕಿ ಭವನ ತಲುಪಿತು. ಮೆರವಣಿಗೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ವಿವಿಧ ಕಲಾ ತಂಡಗಳು ಭಾಗವಹಿಸಿ ಸಾಂಸ್ಕೃತಿಕ ಪ್ರದರ್ಶನ ನೀಡಿದವು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತ ಮುರಳೀಧರ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸುನೀತಾ, ದೇವದುರ್ಗ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಬಿ.ವೈ. ವಾಲ್ಮೀಕಿ, ನಿವೃತ್ತ ಜಿಲ್ಲಾ ಆರೋಗ್ಯಾಧಿಕಾರಿ ಡಾ. ವೆಂಕಟೇಶ, ಸಮಾಜದ ಮುಖಂಡ ರಘುವೀರ್ ನಾಯಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ರೈತರು, ಕೃಷಿ ಕಾರ್ಮಿಕರ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅ.28ರಂದು ಶಿವಸೇನಾ ಕರ್ನಾಟಕದಿಂದ ಹೋರಾಟ

ರಾಯಚೂರು: ರೈತರು, ಕೃಷಿ ಕಾರ್ಮಿಕರು ಹಾಗೂ ಜಾನುವಾರು ಸಾಕಾಣಿಕೆದಾರರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಪರಿಹಾರ ಕಲ್ಪಿಸಬೇಕೆಂದು ಒತ್ತಾಯಿಸಿ ಅಕ್ಟೋಬರ್ 28ರಂದು ರಾಯಚೂರು ನಗರದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಶಿವಸೇನಾ ಕರ್ನಾಟಕ ಪಕ್ಷದ ಜಿಲ್ಲಾಧ್ಯಕ್ಷ ರಾಜಾಚಂದ್ರ ರಾಮನಗೌಡ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮಳೆ ಕೊರತೆ, ಬೆಳೆ ಹಾನಿ, ಕೃಷಿ ಸಾಲ, ನೀರಾವರಿ ಸಮಸ್ಯೆ ಹಾಗೂ ವಿದ್ಯುತ್ ಅಭಾವದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷಿ ಕಾರ್ಮಿಕರಿಗೂ ಸಮರ್ಪಕ ಉದ್ಯೋಗ ದೊರೆಯುತ್ತಿಲ್ಲ. ಈ ಹಿನ್ನೆಲೆಯಲ್ಲಿ ಸರ್ಕಾರ ರೈತರು ಹಾಗೂ ಗ್ರಾಮೀಣ ಕಾರ್ಮಿಕರ ಸಮಸ್ಯೆಗಳಿಗೆ ಆದ್ಯತೆ ನೀಡಬೇಕೆಂದು ಆಗ್ರಹಿಸಿದರು.

ಬೆಳೆ ನಷ್ಟ ಅನುಭವಿಸಿದ ರೈತರಿಗೆ ವೈಜ್ಞಾನಿಕ ಸಮೀಕ್ಷೆ ನಡೆಸಿ ಎಕರೆಗೆ ₹50 ಸಾವಿರದವರೆಗೆ ಪರಿಹಾರ ನೀಡಬೇಕು. ಅರ್ಹ ರೈತರ ಕೃಷಿ ಸಾಲ ಮನ್ನಾ ಮಾಡಬೇಕು. ತುಂಗಭದ್ರಾ ಎಡದಂಡೆ ಹಾಗೂ ನಾರಾಯಣಪುರ ಬಲದಂಡೆ ಕಾಲುವೆಗಳಿಂದ ಸಮರ್ಪಕ ನೀರು ಹರಿಸಬೇಕು. ಕೃಷಿ ಪಂಪ್‌ಸೆಟ್‌ಗಳಿಗೆ ಪ್ರತಿದಿನ 12 ಗಂಟೆ ವಿದ್ಯುತ್ ಪೂರೈಸಬೇಕು ಎಂದು ಒತ್ತಾಯಿಸಿದರು.

ಭತ್ತ, ಹತ್ತಿ, ಜೋಳ, ತೊಗರಿ ಸೇರಿದಂತೆ ಕೃಷಿ ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ನಿಗದಿಪಡಿಸಿ ಖರೀದಿ ಕೇಂದ್ರಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಬೆಳೆ ವಿಮೆ ಹಾಗೂ ಬಾಕಿ ಹಣ ಬಿಡುಗಡೆ ಮಾಡಬೇಕು. ಗುಣಮಟ್ಟದ ಬೀಜ, ರಸಗೊಬ್ಬರ ಪೂರೈಸುವುದರ ಜೊತೆಗೆ ನೀರಾವರಿ ಕಾಲುವೆಗಳ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಜಾನುವಾರುಗಳಿಗೆ ಮೇವು, ಕುಡಿಯುವ ನೀರು ಹಾಗೂ ಪಶುವೈದ್ಯಕೀಯ ಸೌಲಭ್ಯ ಒದಗಿಸಬೇಕು. ಅಗತ್ಯವಿರುವ ಕಡೆ ಗೋಶಾಲೆ ತೆರೆಯಬೇಕು. ಕೃಷಿ ಕಾರ್ಮಿಕರಿಗೆ ಉಚಿತ ಪಡಿತರ, ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಹಾಗೂ ಬಾಕಿ ಕೂಲಿ ಪಾವತಿಗೆ ಕ್ರಮ ಕೈಗೊಳ್ಳಬೇಕು ಎಂದರು.

ಬೇಡಿಕೆಗಳ ಈಡೇರಿಕೆಗೆ ಕಾಲಮಿತಿಯ ಕ್ರಮಯೋಜನೆ ರೂಪಿಸುವಂತೆ ಒತ್ತಾಯಿಸಿ ಅ.28ರಂದು ನಡೆಯುವ ಹೋರಾಟದಲ್ಲಿ ರೈತರು, ಕೃಷಿ ಕಾರ್ಮಿಕರು ಹಾಗೂ ಸಾರ್ವಜನಿಕರು ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಶಿವಸೇನಾ ಗ್ರಾಮೀಣ ಘಟಕದ ಅಧ್ಯಕ್ಷ ಸಂತೋಷ್ ಗೌಡ ಗುಡಿ, ಪ್ರಧಾನ ಕಾರ್ಯದರ್ಶಿ ಪ್ರಭು ಮಡಿವಾಳ, ಜಿಲ್ಲಾ ಉಪಾಧ್ಯಕ್ಷ ರಾಮ, ಅಮೀನರೆಡ್ಡಿ ಗೌಡ ಪೊಲೀಸ್ ಪಾಟೀಲ್ ಉಪಸ್ಥಿತರಿದ್ದರು.

## ಅಯೋಧ್ಯೆಯಲ್ಲಿ ರಾಘವೇಂದ್ರ ಸ್ವಾಮಿಗಳ ಮಠ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ ಸುಬುಧೇಂದ್ರ ತೀರ್ಥ ಶ್ರೀಗಳು

ಅಯೋಧ್ಯೆ, ಅ. 26: ಪವಿತ್ರ ಶ್ರೀಕ್ಷೇತ್ರ ಅಯೋಧ್ಯೆಯಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ನಿರ್ಮಾಣಕ್ಕಾಗಿ ಎರಡು ಸ್ಥಳಗಳಲ್ಲಿ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಸೋಮವಾರ ಭೂಮಿಪೂಜೆ ನೆರವೇರಿಸಿದರು.



ಅಯೋಧ್ಯೆಗೆ ಭೇಟಿ ನೀಡಿದ ಶ್ರೀಗಳು, ಶ್ರೀಮಠದ ವತಿಯಿಂದ ನಿರ್ಮಿಸಲು ಉದ್ದೇಶಿಸಿರುವ ಎರಡು ಮಠಗಳ ನಿರ್ಮಾಣ ಕಾರ್ಯಕ್ಕೆ ವೈದಿಕ ವಿಧಿವಿಧಾನಗಳೊಂದಿಗೆ ಭೂಮಿಪೂಜೆ ಸಲ್ಲಿಸಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಠದ ಭಕ್ತರು, ಶಿಷ್ಯವೃಂದ ಹಾಗೂ ಆಡಳಿತ ಸಿಬ್ಬಂದಿ ಉಪಸ್ಥಿತರಿದ್ದರು.

ಭೂಮಿಪೂಜೆಯ ಬಳಿಕ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಅಯೋಧ್ಯೆಯ ಶ್ರೀರಾಮ ಮಂದಿರಕ್ಕೆ ತೆರಳಿ ಶ್ರೀರಾಮ ದೇವರ ದರ್ಶನ ಪಡೆದು ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಲೋಕಕಲ್ಯಾಣ, ಶಾಂತಿ, ಸಮೃದ್ಧಿ ಹಾಗೂ ಸಮಸ್ತ ಭಕ್ತರ ಸುಖಶಾಂತಿಗಾಗಿ ಪ್ರಾರ್ಥಿಸಿದರು.

ಅಯೋಧ್ಯೆಯಲ್ಲಿ ಶ್ರೀ ರಾಘವೇಂದ್ರ ಸ್ವಾಮಿ ಮಠದ ನಿರ್ಮಾಣಕ್ಕೆ ಚಾಲನೆ ದೊರೆತಿರುವುದು ಶ್ರೀಮಠದ ಇತಿಹಾಸದಲ್ಲಿ ಮಹತ್ವದ ಹೆಜ್ಜೆಯಾಗಿದೆ. ದೇಶದ ವಿವಿಧ ಭಾಗಗಳಿಂದ ಅಯೋಧ್ಯೆಗೆ ಆಗಮಿಸುವ ಶ್ರೀ ರಾಯರ ಭಕ್ತರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಈ ಮಠಗಳನ್ನು ನಿರ್ಮಿಸಲು ಯೋಜಿಸಲಾಗಿದೆ.

ಮಠಗಳ ನಿರ್ಮಾಣ ಪೂರ್ಣಗೊಂಡ ಬಳಿಕ ಅಯೋಧ್ಯೆಗೆ ಭೇಟಿ ನೀಡುವ ಶ್ರೀ ರಾಘವೇಂದ್ರ ಸ್ವಾಮಿಗಳ ಭಕ್ತರಿಗೆ ಅಗತ್ಯ ಸೌಲಭ್ಯಗಳು ಹಾಗೂ ಧಾರ್ಮಿಕ ಚಟುವಟಿಕೆಗಳಿಗೆ ಅನುಕೂಲವಾಗಲಿದೆ. ಈ ಮೂಲಕ ಮಂತ್ರಾಲಯದ ಶ್ರೀಮಠ ಮತ್ತು ಪವಿತ್ರ ಅಯೋಧ್ಯೆ ಕ್ಷೇತ್ರದ ನಡುವಿನ ಆಧ್ಯಾತ್ಮಿಕ ಸಂಬಂಧ ಮತ್ತಷ್ಟು ಬಲಗೊಳ್ಳಲಿದೆ.

ಈ ಸಂದರ್ಭದಲ್ಲಿ ಚಿ. ರಾಜ ಅಪ್ರಮೇಯಾಚಾರ್ಯ, ಕರಣಂ ಪ್ರಕಾಶ್, ಬೆಂಗಳೂರಿನ ಸುಬ್ಬನರಸಿಂಹ, ಅಯೋಧ್ಯೆಯ ಶ್ರೀರಾಮ ದೇವರ ಮಂದಿರದ ಪ್ರಧಾನ ಅರ್ಚಕರು, ಶ್ರೀಮಠದ ಆಡಳಿತ ವರ್ಗದ ಸಿಬ್ಬಂದಿ, ಭಕ್ತರು ಹಾಗೂ ಶಿಷ್ಯವೃಂದ ಉಪಸ್ಥಿತರಿದ್ದು, ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

## ಲಾರಿ ಚಕ್ರಕ್ಕೆ ಸಿಲುಕಿ ಸ್ಕೂಟಿ ಸವಾರ ಸ್ಥಳದಲ್ಲೇ ಸಾವು

ಸಿಂಧನೂರು, ಅ. 26: ನಗರದ ಗಂಗಾವತಿ ರಸ್ತೆಯಲ್ಲಿ ಕಾಂಟೇನರ್ ಲಾರಿಯ ಹಿಂಬದಿ ಚಕ್ರಕ್ಕೆ ಸ್ಕೂಟಿ ಸವಾರ ಸಿಲುಕಿ ಸ್ಥಳದಲ್ಲೇ ಮೃತಪಟ್ಟಿರುವ ದಾರುಣ ಘಟನೆ ನಡೆದಿದೆ.




ಮೃತರನ್ನು ಹೊಸಪೇಟೆ ಮೂಲದ ಚಿನ್ನಪ್ಪ (70) ಎಂದು ಗುರುತಿಸಲಾಗಿದೆ. ನಗರದ ಬ್ಯಾಂಕ್ ಆಫ್ ಬರೋಡಾ ರಸ್ತೆ ಮಾರ್ಗದಲ್ಲಿ ಸ್ಕೂಟಿಯಲ್ಲಿ ಸಂಚರಿಸುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ.

ಗಂಗಾವತಿ ರಸ್ತೆಯಲ್ಲಿ ಸಾಗುತ್ತಿದ್ದ ಕಾಂಟೇನರ್ ಲಾರಿಯ ಹಿಂಬದಿ ಚಕ್ರಕ್ಕೆ ಚಿನ್ನಪ್ಪ ಅವರು ಸಿಲುಕಿದ್ದು, ತಲೆ ಹಾಗೂ ಕೈಗಳಿಗೆ ತೀವ್ರ ಗಾಯಗಳಾಗಿವೆ. ಅಪಘಾತದ ಪರಿಣಾಮ ಗಂಭೀರವಾಗಿ ಗಾಯಗೊಂಡ ಅವರು ಸ್ಥಳದಲ್ಲಿಯೇ ಕೊನೆಯುಸಿರೆಳೆದಿದ್ದಾರೆ.

ಜನನಿಬಿಡ ರಸ್ತೆಯಲ್ಲಿ ಸಂಭವಿಸಿದ ಈ ಅಪಘಾತದಿಂದ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ವಾಹನ ಸಂಚಾರಕ್ಕೂ ಅಡಚಣೆ ಉಂಟಾಯಿತು.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಸಿಂಧನೂರು ಸಂಚಾರಿ ಪೊಲೀಸ್ ಠಾಣೆಯ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು. ಬಳಿಕ ವಾಹನ ಸಂಚಾರವನ್ನು ಸುಗಮಗೊಳಿಸಿ, ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಯಿತು.

ಅಪಘಾತ ಸಂಭವಿಸಿದ ಸಂದರ್ಭದಲ್ಲಿನ ವಾಹನಗಳ ಚಲನವಲನ ಹಾಗೂ ಘಟನೆಗೆ ಕಾರಣವಾದ ಅಂಶಗಳ ಕುರಿತು ಪೊಲೀಸರು ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಲಾರಿ ಚಾಲಕನ ನಿರ್ಲಕ್ಷ್ಯದಿಂದ ಅಪಘಾತ ಸಂಭವಿಸಿದೆಯೇ ಅಥವಾ ಬೇರೆ ಕಾರಣಗಳಿವೆಯೇ ಎಂಬುದು ತನಿಖೆಯಿಂದ ತಿಳಿದುಬರಬೇಕಿದೆ.

ಈ ಕುರಿತು ಸಿಂಧನೂರು ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮುಂದಿನ ತನಿಖೆ ನಡೆಯುತ್ತಿದೆ.

## ಪೋತ್ನಾಳ್ ಬಳಿ ರಸ್ತೆ ಅಪಘಾತಕ್ಕೆ ಕೃಷ್ಣಮೃಗ ಬಲಿ

ಮಾನ್ವಿ, ಅ. 26: ತಾಲೂಕಿನ ಪೋತ್ನಾಳ್ ಗ್ರಾಮದ ಸಮೀಪದ ಹೆದ್ದಾರಿಯಲ್ಲಿ ವಾಹನ ಅಪಘಾತಕ್ಕೆ ಸಿಲುಕಿ ಕೃಷ್ಣಮೃಗವೊಂದು ಮೃತಪಟ್ಟಿದ್ದು, ವನ್ಯಜೀವಿಗಳ ಸಂಚಾರ ಹೆಚ್ಚಿರುವ ರಸ್ತೆಗಳಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಪರಿಸರ ಪ್ರೇಮಿಗಳು ಅರಣ್ಯ ಇಲಾಖೆಯನ್ನು ಒತ್ತಾಯಿಸಿದ್ದಾರೆ.



ಭಾನುವಾರ ರಾತ್ರಿ ಪೋತ್ನಾಳ್ ಗ್ರಾಮದ ಪೆಟ್ರೋಲ್ ಬಂಕ್ ಸಮೀಪ ಕೃಷ್ಣಮೃಗವೊಂದು ರಸ್ತೆ ಅಪಘಾತದಲ್ಲಿ ಗಾಯಗೊಂಡಿರುವುದನ್ನು ಗಮನಿಸಿದ ಸಾರ್ವಜನಿಕರು, ಅದರ ಜೀವ ಉಳಿಸುವ ಉದ್ದೇಶದಿಂದ ತಕ್ಷಣ ಅರಣ್ಯ ಇಲಾಖೆಗೆ ಮಾಹಿತಿ ನೀಡಿದರು.

ಮಾಹಿತಿ ಪಡೆದ ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ತೆರಳಿ ಗಾಯಗೊಂಡಿದ್ದ ಕೃಷ್ಣಮೃಗವನ್ನು ವಾಹನದ ಮೂಲಕ ಮಾನ್ವಿಗೆ ಸಾಗಿಸಿದರು. ಆದರೆ ಅಪಘಾತದಿಂದ ಕೃಷ್ಣಮೃಗ ಮೃತಪಟ್ಟಿರುವುದು ದೃಢಪಟ್ಟ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯ ನಿಯಮಾನುಸಾರ ಮೃತದೇಹವನ್ನು ವಿಲೇವಾರಿ ಮಾಡಲಾಗಿದೆ ಎಂದು ಮಾನ್ವಿ ವಲಯ ಅರಣ್ಯಾಧಿಕಾರಿ ಪುರುಷೋತ್ತಮ ರಾವ್ ಜೀ ತಿಳಿಸಿದ್ದಾರೆ.

ರಾಯಚೂರುಸಿಂಧನೂರು ಚತುಷ್ಪಥ ರಾಜ್ಯ ಹೆದ್ದಾರಿಯ ಕಪಗಲ್, ಮಾನ್ವಿ ಪಟ್ಟಣದ ಹೊರವಲಯ ಹಾಗೂ ಪೋತ್ನಾಳ್ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೃಷ್ಣಮೃಗಗಳ ಸಂಚಾರ ಹೆಚ್ಚಾಗಿ ಕಂಡುಬರುತ್ತಿದೆ. ಆಹಾರ ಮತ್ತು ಕುಡಿಯುವ ನೀರಿಗಾಗಿ ವನ್ಯಜೀವಿಗಳು ರಸ್ತೆ ದಾಟಿ ಜನವಸತಿ ಪ್ರದೇಶಗಳ ಸಮೀಪಕ್ಕೂ ಬರುತ್ತಿರುವುದು ಸಾಮಾನ್ಯವಾಗಿದೆ.

ಇಂತಹ ಪ್ರದೇಶಗಳಲ್ಲಿ ವೇಗವಾಗಿ ಸಂಚರಿಸುವ ವಾಹನಗಳಿಂದ ಕೃಷ್ಣಮೃಗ ಸೇರಿದಂತೆ ಇತರ ವನ್ಯಜೀವಿಗಳ ಜೀವಕ್ಕೆ ಅಪಾಯ ಎದುರಾಗುತ್ತಿದೆ ಎಂದು ಪರಿಸರ ಪ್ರೇಮಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಕೃಷ್ಣಮೃಗಗಳು ಹೆಚ್ಚಾಗಿ ಸಂಚರಿಸುವ ಸ್ಥಳಗಳನ್ನು ಅರಣ್ಯ ಇಲಾಖೆ ಗುರುತಿಸಿ, ಹೆದ್ದಾರಿಯ ಎರಡೂ ಬದಿಗಳಲ್ಲಿ ವನ್ಯಜೀವಿಗಳ ಸಂಚಾರದ ಕುರಿತು ಎಚ್ಚರಿಕೆ ಫಲಕಗಳನ್ನು ಅಳವಡಿಸಬೇಕು. ಅಗತ್ಯವಿರುವ ಕಡೆ ವಾಹನಗಳ ವೇಗ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ವಾಹನ ಸವಾರರು ಕೂಡ ವನ್ಯಜೀವಿಗಳ ಸಂಚಾರವಿರುವ ಪ್ರದೇಶಗಳಲ್ಲಿ ಎಚ್ಚರಿಕೆಯಿಂದ ವಾಹನ ಚಲಾಯಿಸಬೇಕು. ಅರಣ್ಯ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಕೃಷ್ಣಮೃಗ ಮತ್ತು ಚಿಗರೆಗಳ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಪರಿಸರ ಪ್ರೇಮಿಗಳು ಒತ್ತಾಯಿಸಿದ್ದಾರೆ.

## ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಜೆಡಿಎಸ್ ಮುಖಂಡರಿಂದ ಮಾಲಾರ್ಪಣೆ



ರಾಯಚೂರು, ಅ.26: ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಜಿಲ್ಲಾ ಜನತಾದಳ (ಜಾತ್ಯತೀತ) ಪಕ್ಷದ ವತಿಯಿಂದ ಮಹರ್ಷಿ ವಾಲ್ಮೀಕಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು.

ಜೆಡಿಎಸ್ ಜಿಲ್ಲಾಧ್ಯಕ್ಷ ಎಂ. ವಿರೂಪಾಕ್ಷಿ ಅವರ ನೇತೃತ್ವದಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಮಹರ್ಷಿ ವಾಲ್ಮೀಕಿ ಅವರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿ ಜಯಂತಿಯನ್ನು ಆಚರಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಪರಿಶಿಷ್ಟ ಪಂಗಡ ವಿಭಾಗದ ರಾಜ್ಯ ಉಪಾಧ್ಯಕ್ಷ ಸಣ್ಣ ನರಸಿಂಹ ನಾಯಕ್, ರಾಜ್ಯ ಪ್ರಧಾನ ಕಾರ್ಯದರ್ಶಿ ಗಾಣದಾಳ ಲಕ್ಷ್ಮಿಪತಿ, ಪರಿಶಿಷ್ಟ ಜಾತಿ ವಿಭಾಗದ ಜಿಲ್ಲಾಧ್ಯಕ್ಷ ನರಸಪ್ಪ ಆಶಾಪುರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಜಂಬು ಯಾದವ್ ಸೇರಿದಂತೆ ಪಕ್ಷದ ಮುಖಂಡರು ಭಾಗವಹಿಸಿದ್ದರು.

ಮಹರ್ಷಿ ವಾಲ್ಮೀಕಿ ಅವರು ತಮ್ಮ ರಾಮಾಯಣ ಮಹಾಕಾವ್ಯದ ಮೂಲಕ ಸಮಾಜಕ್ಕೆ ನೀತಿ, ಧರ್ಮ, ಸತ್ಯ ಮತ್ತು ಮಾನವೀಯ ಮೌಲ್ಯಗಳ ಸಂದೇಶ ನೀಡಿದ್ದಾರೆ. ಅವರ ಆದರ್ಶಗಳು ಇಂದಿನ ಪೀಳಿಗೆಗೆ ಮಾರ್ಗದರ್ಶಿಯಾಗಿವೆ ಎಂದು ಮುಖಂಡರು ಸ್ಮರಿಸಿದರು.

ಈ ಸಂದರ್ಭದಲ್ಲಿ ಎಸ್. ರಾಜು, ಎಚ್.ಕೆ. ರವಿಕುಮಾರ್, ಆದಿರಾಜ್, ಮೂಕಪ್ಪ, ಪ್ರಕಾಶ್, ವೆಂಕಟಸ್ವಾಮಿ ಸೇರಿದಂತೆ ಜೆಡಿಎಸ್ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ರಾಮಾಯಣ ಜಗತ್ತಿಗೆ ಮಾನವೀಯ ಮೌಲ್ಯಗಳನ್ನು ಸಾರಿದ ಮಹಾಕಾವ್ಯ: ಎನ್. ಶಂಕ್ರಪ್ಪ

ರಾಯಚೂರು, ಅ. 26: ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣವು ವಿಶ್ವದಾದ್ಯಂತ ಗೌರವ ಪಡೆದಿರುವ ಶ್ರೇಷ್ಠ ಮಹಾಕಾವ್ಯವಾಗಿದ್ದು, ಭಾರತೀಯ ಸಂಸ್ಕೃತಿ, ಧಾರ್ಮಿಕ ಪರಂಪರೆ ಹಾಗೂ ಮಾನವೀಯ ಮೌಲ್ಯಗಳನ್ನು ಜಗತ್ತಿಗೆ ಪರಿಚಯಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ವಿಧಾನ ಪರಿಷತ್ತಿನ ಮಾಜಿ ಸದಸ್ಯ ಎನ್. ಶಂಕ್ರಪ್ಪ ವಕೀಲರು ಹೇಳಿದರು.




ನಗರದ ಭಾರತೀಯ ಜನತಾ ಪಕ್ಷದ ಜಿಲ್ಲಾ ಕಚೇರಿಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ರಾಮಾಯಣವು ಕೇವಲ ಧಾರ್ಮಿಕ ಕಥನಕ್ಕೆ ಸೀಮಿತವಾಗಿಲ್ಲ. ಮನುಷ್ಯನ ಜೀವನದಲ್ಲಿ ಸತ್ಯ, ಧರ್ಮ, ತ್ಯಾಗ, ಕರ್ತವ್ಯನಿಷ್ಠೆ ಹಾಗೂ ಕೌಟುಂಬಿಕ ಸಂಬಂಧಗಳಿಗೆ ಇರುವ ಮಹತ್ವವನ್ನು ತಿಳಿಸಿಕೊಡುವ ಅಮೂಲ್ಯ ಕೃತಿಯಾಗಿದೆ. ಶ್ರೀರಾಮನ ಆದರ್ಶ ಜೀವನದ ಮೂಲಕ ಸಮಾಜಕ್ಕೆ ಉತ್ತಮ ನಡವಳಿಕೆ ಮತ್ತು ಮಾನವೀಯತೆಯ ಸಂದೇಶವನ್ನು ಮಹರ್ಷಿ ವಾಲ್ಮೀಕಿ ನೀಡಿದ್ದಾರೆ ಎಂದು ತಿಳಿಸಿದರು.

ಮಹರ್ಷಿ ವಾಲ್ಮೀಕಿಯವರ ಸಾಹಿತ್ಯವು ಭಾರತೀಯ ಸಂಸ್ಕೃತಿಯ ಶ್ರೀಮಂತಿಕೆಯನ್ನು ಪ್ರತಿಬಿಂಬಿಸುತ್ತದೆ. ಅವರ ಚಿಂತನೆಗಳು ಇಂದಿನ ಯುವಪೀಳಿಗೆಗೂ ಮಾರ್ಗದರ್ಶನ ನೀಡುವಂತಿದ್ದು, ಪ್ರತಿಯೊಬ್ಬರೂ ಮಹನೀಯರ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಬಿಜೆಪಿ ಮಂಡಲ ಉಪಾಧ್ಯಕ್ಷ ಪಲುಗುಲ ನಾಗರಾಜ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರನ್ನು ಯಾವುದೇ ಒಂದು ಜಾತಿ ಅಥವಾ ಸಮುದಾಯಕ್ಕೆ ಸೀಮಿತಗೊಳಿಸುವುದು ಸರಿಯಲ್ಲ. ಅವರು ಜಾತಿ, ಮತಗಳ ಗಡಿಯನ್ನು ಮೀರಿ ಇಡೀ ಮಾನವಕುಲಕ್ಕೆ ಆದರ್ಶಪ್ರಾಯರಾದ ಮಹಾನ್ ವ್ಯಕ್ತಿಯಾಗಿದ್ದಾರೆ ಎಂದು ಹೇಳಿದರು.

ಮಹರ್ಷಿ ವಾಲ್ಮೀಕಿ, ಗೌತಮ ಬುದ್ಧ, ಬಸವಣ್ಣ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರಂತಹ ಮಹನೀಯರು ಸಮಾಜದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಅವರ ವಿಚಾರಧಾರೆಗಳನ್ನು ಜಾತಿಯ ಚೌಕಟ್ಟಿನಲ್ಲಿ ನೋಡುವ ಬದಲು, ಸಮಾನತೆ, ಸಹೋದರತ್ವ ಹಾಗೂ ಮಾನವೀಯತೆಯ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಆರಂಭದಲ್ಲಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಹಾಗೂ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರವೀಂದ್ರ ಜಲ್ದಾರ್, ಸಂತೋಷ ರಾಜಗುರು, ಜಂಬಣ್ಣ ನಿಲೋಗಲ್, ಕಡಗೋಲು ಆಂಜನೇಯ, ವೈ. ಗೋಪಾಲ ರೆಡ್ಡಿ, ವೀರೇಶ ನಾಯಕ, ನರಸಿಂಹ, ಮಂಚಾಲ ಭೀಮಣ್ಣ, ದೊರಬಾಬು, ಜೆ.ಎಂ. ಮೌನೇಶ, ಪ್ರದೀಪ ಸಾನಬಾಳ, ಎನ್. ವಿನಾಯಕ ರಾವ್, ನರೇಂದ್ರ ನಾಯಕ, ವಿ. ಗೋವಿಂದ, ಅಶ್ವಿನಿ, ಚಂದ್ರಾವತಿ, ನಿವೇದಿತಾ, ರಾಧಾ ಸೇರಿದಂತೆ ಪಕ್ಷದ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಹರ್ಷಿ ವಾಲ್ಮೀಕಿ ಆದರ್ಶಗಳು ಸಮಾನತೆ ಮತ್ತು ಮಾನವೀಯತೆಗೆ ದಾರಿದೀಪ: ಜಿ.ಕೆ. ನಾಗರಾಜ

ಕಲ್ಮಲಾ, ಅ. 26: ಮಹರ್ಷಿ ವಾಲ್ಮೀಕಿ ಅವರು ತಮ್ಮ ರಾಮಾಯಣ ಮಹಾಕಾವ್ಯದ ಮೂಲಕ ಸತ್ಯ, ಧರ್ಮ, ನ್ಯಾಯ, ತ್ಯಾಗ ಹಾಗೂ ಮಾನವೀಯ ಮೌಲ್ಯಗಳನ್ನು ಜಗತ್ತಿಗೆ ಸಾರಿದ ಮಹಾನ್ ಋಷಿಯಾಗಿದ್ದು, ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅತಿಥಿ ಶಿಕ್ಷಕರ ಸಂಘದ ಅಧ್ಯಕ್ಷ ಜಿ.ಕೆ. ನಾಗರಾಜ ಹೇಳಿದರು.



ಕಲ್ಮಲಾದ ಜನತಾ ಕಾಲೋನಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಆಯೋಜಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತೀಯ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಂಪರೆಯಲ್ಲಿ ಮಹರ್ಷಿ ವಾಲ್ಮೀಕಿ ಅವರಿಗೆ ಅತ್ಯಂತ ಗೌರವಾನ್ವಿತ ಸ್ಥಾನವಿದೆ. ಸಂಸ್ಕೃತ ಸಾಹಿತ್ಯದ ಆದಿಕವಿ ಎಂದು ಗುರುತಿಸಲ್ಪಡುವ ಅವರು ರಚಿಸಿದ ರಾಮಾಯಣವು ಕೇವಲ ಶ್ರೀರಾಮನ ಜೀವನ ಚರಿತ್ರೆಯಲ್ಲ. ಕುಟುಂಬದ ಜವಾಬ್ದಾರಿ, ಕರ್ತವ್ಯನಿಷ್ಠೆ, ಸಹೋದರತ್ವ, ಪ್ರೀತಿ, ತ್ಯಾಗ, ಸತ್ಯನಿಷ್ಠೆ ಮತ್ತು ಧರ್ಮಪಾಲನೆಯಂತಹ ಜೀವನ ಮೌಲ್ಯಗಳನ್ನು ತಿಳಿಸಿಕೊಡುವ ಮಹಾಕಾವ್ಯವಾಗಿದೆ ಎಂದು ವಿವರಿಸಿದರು.

ರಾಮಾಯಣದ ವಿವಿಧ ಪಾತ್ರಗಳು ಮನುಷ್ಯ ತನ್ನ ಜೀವನದಲ್ಲಿ ಎದುರಿಸುವ ಸವಾಲುಗಳನ್ನು ಹೇಗೆ ಎದುರಿಸಬೇಕು ಹಾಗೂ ಕಷ್ಟದ ಸಂದರ್ಭಗಳಲ್ಲಿಯೂ ನೈತಿಕ ಮೌಲ್ಯಗಳಿಗೆ ಹೇಗೆ ಬದ್ಧರಾಗಿರಬೇಕು ಎಂಬುದನ್ನು ತಿಳಿಸಿಕೊಡುತ್ತವೆ. ಮಹರ್ಷಿ ವಾಲ್ಮೀಕಿಯವರ ಜೀವನವು ಜ್ಞಾನ, ತಪಸ್ಸು, ಆತ್ಮಪರಿಶೀಲನೆ ಮತ್ತು ವ್ಯಕ್ತಿತ್ವ ಪರಿವರ್ತನೆಯ ಮಹತ್ವವನ್ನು ಸಾರುತ್ತದೆ ಎಂದರು.

ಸಮಾಜದಲ್ಲಿ ಸಮಾನತೆ, ಸಹೋದರತ್ವ, ಪರಸ್ಪರ ಗೌರವ ಹಾಗೂ ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ಬೆಳೆಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಶಿಕ್ಷಣವು ಸಮಾಜದ ಎಲ್ಲ ವರ್ಗಗಳಿಗೂ ತಲುಪಬೇಕು. ವಿಶೇಷವಾಗಿ ಬಡವರು, ಹಿಂದುಳಿದವರು ಹಾಗೂ ಅವಕಾಶಗಳಿಂದ ವಂಚಿತರಾದ ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಯುವಂತೆ ಮಾಡಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳು ಬಾಲ್ಯದಿಂದಲೇ ಸತ್ಯ, ಪ್ರಾಮಾಣಿಕತೆ, ಶಿಸ್ತು, ಆತ್ಮವಿಶ್ವಾಸ ಮತ್ತು ಜ್ಞಾನಾರ್ಜನೆಯ ಗುಣಗಳನ್ನು ಬೆಳೆಸಿಕೊಳ್ಳಬೇಕು. ಯುವಪೀಳಿಗೆ ಜಾತಿ, ಧರ್ಮದ ಭೇದಭಾವಗಳನ್ನು ಬದಿಗಿಟ್ಟು ಸಮಾನತೆ ಮತ್ತು ಮಾನವೀಯತೆಯ ಆಧಾರದ ಮೇಲೆ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ವಾಲ್ಮೀಕಿ ಜಯಂತಿಯು ಕೇವಲ ಆಚರಣೆಗೆ ಸೀಮಿತವಾಗದೆ, ಜ್ಞಾನ, ಸಮಾನತೆ, ಮಾನವೀಯತೆ ಹಾಗೂ ಸಾಮಾಜಿಕ ಪರಿವರ್ತನೆಯ ಮೌಲ್ಯಗಳನ್ನು ಸ್ಮರಿಸುವ ದಿನವಾಗಬೇಕು. ಮಹರ್ಷಿಗಳ ಆದರ್ಶಗಳು ಪ್ರತಿಯೊಬ್ಬರ ಬದುಕಿಗೆ ಮಾರ್ಗದರ್ಶನ ನೀಡಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯಶಿಕ್ಷಕಿ ಸುಮಲತಾ ಬಿ., ಸಹಶಿಕ್ಷಕಿ ಸಂಗಮೇಶ್ವರಿ, ಅತಿಥಿ ಶಿಕ್ಷಕರ ಸಂಘದ ಅಧ್ಯಕ್ಷ ಜಿ.ಕೆ. ನಾಗರಾಜ, ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ) ಅಧ್ಯಕ್ಷೆ ಚಂದ್ರಕಲಾ ನಾಗರಾಜ ಹಾಗೂ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ: ಪುತ್ಥಳಿಗೆ ಮಾಲಾರ್ಪಣೆ

ರಾಯಚೂರು, ಅ. 26: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ನಗರದಲ್ಲಿ ಮಹರ್ಷಿ ವಾಲ್ಮೀಕಿ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸುವ ಮೂಲಕ ಗೌರವಪೂರ್ವಕವಾಗಿ ಜಯಂತಿ ಆಚರಿಸಲಾಯಿತು.



ಈ ಸಂದರ್ಭದಲ್ಲಿ ಸಮಾಜದ ಹಿರಿಯರು, ಮುಖಂಡರು ಹಾಗೂ ಅಧಿಕಾರಿಗಳು ಮಹರ್ಷಿ ವಾಲ್ಮೀಕಿ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಅವರ ಜೀವನ, ಸಾಹಿತ್ಯ ಮತ್ತು ಆದರ್ಶಗಳನ್ನು ಸ್ಮರಿಸಿದರು.

ಭಾರತೀಯ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಂಪರೆಯಲ್ಲಿ ಮಹರ್ಷಿ ವಾಲ್ಮೀಕಿ ಅವರಿಗೆ ವಿಶಿಷ್ಟ ಸ್ಥಾನವಿದೆ. ರಾಮಾಯಣ ಮಹಾಕಾವ್ಯವನ್ನು ರಚಿಸುವ ಮೂಲಕ ಅವರು ಮಾನವ ಸಮಾಜಕ್ಕೆ ಸತ್ಯ, ಧರ್ಮ, ತ್ಯಾಗ, ಮಾನವೀಯತೆ ಹಾಗೂ ಆದರ್ಶ ಜೀವನದ ಮೌಲ್ಯಗಳನ್ನು ಪರಿಚಯಿಸಿದ್ದಾರೆ ಎಂದು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖಂಡರು ಅಭಿಪ್ರಾಯಪಟ್ಟರು.

ಮಹರ್ಷಿ ವಾಲ್ಮೀಕಿ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದ ಮಹನೀಯರಲ್ಲ. ಅವರ ಚಿಂತನೆಗಳು ಹಾಗೂ ಸಾಹಿತ್ಯ ಇಡೀ ಮಾನವಕುಲಕ್ಕೆ ಮಾರ್ಗದರ್ಶನ ನೀಡುವಂತಿವೆ. ರಾಮಾಯಣ ಮಹಾಕಾವ್ಯವು ಮಾನವ ಸಂಬಂಧಗಳು, ಕುಟುಂಬದ ಜವಾಬ್ದಾರಿ, ಕರ್ತವ್ಯನಿಷ್ಠೆ ಮತ್ತು ನೈತಿಕ ಮೌಲ್ಯಗಳ ಮಹತ್ವವನ್ನು ತಿಳಿಸಿಕೊಡುತ್ತದೆ ಎಂದು ಹೇಳಿದರು.

ಮಹರ್ಷಿ ವಾಲ್ಮೀಕಿಯವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ವಿಶೇಷವಾಗಿ ಯುವಪೀಳಿಗೆಗೆ ಅವರ ಸಾಹಿತ್ಯ ಹಾಗೂ ಜೀವನ ಸಂದೇಶಗಳನ್ನು ಪರಿಚಯಿಸುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಮಾಜದ ಹಿರಿಯರು, ವಿವಿಧ ಸಂಘಟನೆಗಳ ಮುಖಂಡರು, ಅಧಿಕಾರಿಗಳು ಹಾಗೂ ಸಮಾಜದ ಬಂಧುಗಳು ಉಪಸ್ಥಿತರಿದ್ದು, ಮಹರ್ಷಿ ವಾಲ್ಮೀಕಿ ಅವರಿಗೆ ಗೌರವ ಸಲ್ಲಿಸಿದರು.

# ವಿಜಯೋತ್ಸವಕ್ಕೆ ವಿದ್ಯಾರ್ಥಿಗಳೊಂದಿಗೆ ಸರಳ ಚಾಲನೆ: ಆತ್ಮವಿಶ್ವಾಸ ಮತ್ತು ದೈಹಿಕ ಸದೃಢತೆಗೆ ಡಾ. ವೀರೇಂದ್ರ ಜಲ್ದಾರ್ ಕರೆ

ರಾಯಚೂರು: ನಗರದ ವಿ.ಜೆ. ಇಂಟರ್‌ನ್ಯಾಷನಲ್ಸ್ ಪ್ರೊಡಕ್ಷನ್ ವತಿಯಿಂದ ಅಕ್ಟೋಬರ್ 25ರಂದು ರಾಯಚೂರು ವಿಜಯೋತ್ಸವ ಕಾರ್ಯಕ್ರಮಕ್ಕೆ ಕಾಲೇಜು ವಿದ್ಯಾರ್ಥಿಗಳೊಂದಿಗೆ ಸರಳವಾಗಿ ಚಾಲನೆ ನೀಡಲಾಯಿತು.



ಕಾರ್ಯಕ್ರಮದಲ್ಲಿ ವಿ.ಜೆ. ಇಂಟರ್‌ನ್ಯಾಷನಲ್ಸ್ ಪ್ರೊಡಕ್ಷನ್ ಮುಖ್ಯಸ್ಥ ಡಾ. ವೀರೇಂದ್ರ ಜಲ್ದಾರ್ ಅವರು ವಿದ್ಯಾರ್ಥಿಗಳಿಗೆ ನೆವರ್ ಗಿವ್ ಅಪ್ (ಎಂದಿಗೂ ಸೋಲೊಪ್ಪಿಕೊಳ್ಳಬೇಡಿ) ಎಂಬ ವಿಷಯದ ಕುರಿತು ಸ್ವಯಂ ಪ್ರೇರಣೆಯ ವಿಶೇಷ ತರಗತಿ ನಡೆಸಿ ಮಾತನಾಡಿದರು.

ಜೀವನದಲ್ಲಿ ಎದುರಾಗುವ ಸವಾಲುಗಳು ಹಾಗೂ ಸೋಲುಗಳಿಗೆ ಹೆದರದೆ ಆತ್ಮವಿಶ್ವಾಸದಿಂದ ಮುನ್ನಡೆಯಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನಲ್ಲಿರುವ ಪ್ರತಿಭೆ ಮತ್ತು ಸಾಮರ್ಥ್ಯವನ್ನು ಗುರುತಿಸಿಕೊಂಡು ನಿರಂತರ ಪ್ರಯತ್ನದ ಮೂಲಕ ಗುರಿ ಸಾಧಿಸಬೇಕು ಎಂದು ಪ್ರೇರೇಪಿಸಿದರು.

ರಾಯಚೂರು ನಗರ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಿಂದ ಆಗಮಿಸಿದ್ದ ವಿದ್ಯಾರ್ಥಿಗಳಿಗೆ ನೆವರ್ ಗಿವ್ ಅಪ್, ಡ್ಯಾನ್ಸ್ ಟು ಫಿಟ್ನೆಸ್ ಹಾಗೂ ಫಿಸಿಕಲಿ ಫಿಟ್ ಆ್ಯಂಡ್ ಮೆಂಟಲಿ ಸ್ಟ್ರಾಂಗ್ ಎಂಬ ವಿಷಯಗಳ ಕುರಿತು ಅರಿವು ಮೂಡಿಸಲಾಯಿತು.

ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ದೈಹಿಕ ಆರೋಗ್ಯ ಮತ್ತು ಮಾನಸಿಕ ಸದೃಢತೆಗೂ ಆದ್ಯತೆ ನೀಡಬೇಕು. ನೃತ್ಯ, ಸಂಗೀತ ಹಾಗೂ ಸೃಜನಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ದೈಹಿಕ ಚುರುಕುತನದೊಂದಿಗೆ ಮನಸ್ಸಿನ ಉಲ್ಲಾಸವನ್ನೂ ಕಾಪಾಡಿಕೊಳ್ಳಬಹುದು ಎಂದು ಡಾ. ವೀರೇಂದ್ರ ಜಲ್ದಾರ್ ತಿಳಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಲಾಯಿತು. ವಿದ್ಯಾರ್ಥಿಗಳೊಂದಿಗೆ ಹಾಡುಗಳನ್ನು ಹಾಡಿ, ನೃತ್ಯದಲ್ಲಿ ಭಾಗವಹಿಸುವ ಮೂಲಕ ಕಾರ್ಯಕ್ರಮಕ್ಕೆ ಸಂಭ್ರಮದ ಮೆರುಗು ನೀಡಲಾಯಿತು. ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಸಕಾರಾತ್ಮಕ ಚಿಂತನೆ ಹಾಗೂ ಆರೋಗ್ಯಕರ ಜೀವನಶೈಲಿಯ ಮಹತ್ವವನ್ನು ತಿಳಿಸುವ ಉದ್ದೇಶದಿಂದ ಆಯೋಜಿಸಿದ್ದ ಕಾರ್ಯಕ್ರಮವು ಸರಳವಾಗಿ ಮುಕ್ತಾಯಗೊಂಡಿತು.

# ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ: ವಾಲ್ಮೀಕಿ ವೃತ್ತ ನಿರ್ಮಾಣಕ್ಕೆ ₹11 ಸಾವಿರ ನೆರವು ಘೋಷಣೆ

ಜಾಲಹಳ್ಳಿ, ಅ.26: ದೇವದುರ್ಗ ತಾಲೂಕಿನ ಹೊಸೂರು ಸಿದ್ದಾಪುರ ಗ್ರಾಮದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಗ್ರಾಮಸ್ಥರು ಹಾಗೂ ಸಮಾಜದ ಮುಖಂಡರು ಶ್ರದ್ಧಾಭಕ್ತಿಯಿಂದ ಆಚರಿಸಿದರು. ಕಾರ್ಯಕ್ರಮದಲ್ಲಿ ಪಿಡ್ಡಪ್ಪ ಶರಣ ಹಾಗೂ ಅಂಬರೇಶ ತಾತ ಅವರು ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಸಮಾಜದ ಮುಖಂಡ ಚಂದಪ್ಪ ಬುದ್ದಿನ್ನಿ, ಅಯೋಧ್ಯೆಯಲ್ಲಿ ಶ್ರೀರಾಮನಿಗೆ ದೊರೆಯುವ ಗೌರವದಂತೆ ರಾಮಾಯಣ ಮಹಾಕಾವ್ಯವನ್ನು ರಚಿಸಿದ ಮಹರ್ಷಿ ವಾಲ್ಮೀಕಿ ಅವರಿಗೂ ಗೌರವ ದೊರೆಯಬೇಕು. ವಾಲ್ಮೀಕಿ ಅವರು ಇಡೀ ವಿಶ್ವಕ್ಕೆ ಮಾನವೀಯತೆ, ಸತ್ಯ, ಧರ್ಮ ಮತ್ತು ನ್ಯಾಯದ ಸಂದೇಶ ಸಾರಿದ ಮಹಾನ್ ಋಷಿಯಾಗಿದ್ದಾರೆ. ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ ಅವರ ಹೆಸರಿನಲ್ಲಿ ವೃತ್ತ ನಿರ್ಮಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟ ಅವರು, ವಾಲ್ಮೀಕಿ ವೃತ್ತ ನಿರ್ಮಾಣ ಕಾರ್ಯಕ್ಕೆ ವೈಯಕ್ತಿಕವಾಗಿ ₹11 ಸಾವಿರ ಆರ್ಥಿಕ ನೆರವು ನೀಡುವುದಾಗಿ ಘೋಷಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮುದುರಂಗಪ್ಪ ಜಲ್ಲಿ, ಮೌನೇಶ್ ಜಲ್ಲಿ ಹಾಗೂ ತಿಮ್ಮಣ್ಣ ಬುಂಕಲದೊಡ್ಡಿ ಅವರು, ಮಹರ್ಷಿ ವಾಲ್ಮೀಕಿ ಅವರ ಜೀವನ ಮತ್ತು ಸಾಧನೆಗಳು ಸಮಾಜಕ್ಕೆ ಸದಾ ಸ್ಫೂರ್ತಿಯಾಗಿವೆ. ಅವರ ಚಿಂತನೆಗಳು ಹಾಗೂ ರಾಮಾಯಣದ ಮೂಲಕ ನೀಡಿದ ಸಂದೇಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಗ್ರಾಮದಲ್ಲಿ ಅವರ ಹೆಸರನ್ನು ಶಾಶ್ವತವಾಗಿ ಉಳಿಸುವಂತಹ ಸಮಾಜಮುಖಿ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಾಲ್ಮೀಕಿ ಸಮಾಜದ ಅಧ್ಯಕ್ಷ ತಿಮ್ಮಣ್ಣ ಜಲ್ಲಿ, ಚಂದಪ್ಪ ಬುದ್ದಿನ್ನಿ, ಸಂಜೀವಣ್ಣ ದಳಪತಿ, ಮಾನಪ್ಪ ಕಾವಲಿ, ಬಸವರಾಜ ಮಂಡಲಗುಡ್ಡ, ಲಚಮಯ್ಯ ಜಲ್ಲಿ, ಅಯ್ಯಪ್ಪ ಜಲ್ಲಿ, ದುರುಗಯ್ಯ ಯಲಗಟ್ಟಿ, ಶಿವಪ್ಪ ಬೆಲ್ಲದ, ರಂಗಪ್ಪ ಕಾವಲಿ, ತಿಮ್ಮಣ್ಣ ಮುರಾಳ, ದೇವೇಂದ್ರ ದೇವಿಗುಡಿ, ಬಸಯ್ಯ ಜಲ್ಲಿ, ದುರುರಂಗಪ್ಪ ಜಲ್ಲಿ, ಬಸವರಾಜ ದೊಡ್ಡಮನಿ, ಶಿವರಾಜ ಮುರಾಳ, ಮಹೇಂದ್ರ ಕುರ್ಮಾ, ತಿಮ್ಮಣ್ಣ ಬುಂಕಲದೊಡ್ಡಿ, ಸಿದ್ದಣ್ಣ ಕಾವಲಿ, ರಂಗಪ್ಪ ಜೋಳದಡಗಿ, ಗೋಪಾಲ ಕಾವಲಿ, ಜಯಪ್ಪ ಬೆಲ್ಲದ, ಮೌನೇಶ್ ಜಲ್ಲಿ, ಸಿದ್ದಪ್ಪ ದೊಡ್ಡಮನಿ, ಸಿದ್ದಪ್ಪ ಜಲ್ಲಿ, ಕೃಷ್ಣ ಯಾದವ್, ಮುದುಕಪ್ಪ ಕಾವಲಿ, ವೆಂಕಟೇಶ್ ಕಸನದೊಡ್ಡಿ, ಭೀಮಣ್ಣ, ವೆಂಕಟೇಶ್ ಮುಂಡರಗಿ, ತಿಮ್ಮಣ್ಣ ನಾಯಕ, ಸಿದ್ದರಾಮ, ತಿರುಪತಿ ದೊಡ್ಡಮನಿ, ಮಲ್ಲಣ್ಣ ಸೇರಿದಂತೆ ವಾಲ್ಮೀಕಿ ಸಮಾಜದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕಕ್ಕಲದೊಡ್ಡಿ ಗ್ರಾಮದಲ್ಲಿ ಶ್ರದ್ಧಾಭಕ್ತಿಯಿಂದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

ಜಾಲಹಳ್ಳಿ, ಅ.26: ಸಮೀಪದ ಕಕ್ಕಲದೊಡ್ಡಿ ಗ್ರಾಮದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಗ್ರಾಮಸ್ಥರು ಶ್ರದ್ಧಾಭಕ್ತಿಯಿಂದ ಆಚರಿಸಿದರು.



ಕಾರ್ಯಕ್ರಮದಲ್ಲಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಲಾಯಿತು. ಗ್ರಾಮದ ಮುಖಂಡರು, ಯುವಕರು ಹಾಗೂ ಸಾರ್ವಜನಿಕರು ಭಾಗವಹಿಸಿ ಮಹರ್ಷಿ ವಾಲ್ಮೀಕಿ ಅವರ ಜೀವನ ಮತ್ತು ಸಾಧನೆಗಳನ್ನು ಸ್ಮರಿಸಿದರು.

ರಾಮಾಯಣ ಮಹಾಕಾವ್ಯವನ್ನು ರಚಿಸುವ ಮೂಲಕ ಮಹರ್ಷಿ ವಾಲ್ಮೀಕಿ ಅವರು ಜಗತ್ತಿಗೆ ಸತ್ಯ, ಧರ್ಮ, ನ್ಯಾಯ ಹಾಗೂ ಮಾನವೀಯ ಮೌಲ್ಯಗಳ ಸಂದೇಶ ನೀಡಿದ್ದಾರೆ. ಅವರ ತತ್ವಾದರ್ಶಗಳು ಸಮಾಜಕ್ಕೆ ಸದಾ ಮಾರ್ಗದರ್ಶಕವಾಗಿದ್ದು, ಪ್ರತಿಯೊಬ್ಬರೂ ಅವುಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಸಾಮರಸ್ಯ ಹಾಗೂ ಸಹಬಾಳ್ವೆಯನ್ನು ಬೆಳೆಸಿಕೊಳ್ಳಬೇಕು ಎಂಬ ಅಭಿಪ್ರಾಯವನ್ನು ಕಾರ್ಯಕ್ರಮದಲ್ಲಿ ವ್ಯಕ್ತಪಡಿಸಲಾಯಿತು.

ಈ ಸಂದರ್ಭದಲ್ಲಿ ಅಂಬರಯ್ಯ ಸ್ವಾಮಿ ಹಿರೇಮಠ, ರಾಚಯ್ಯ ಸ್ವಾಮಿ ಮಠ, ಶಂಕರ್ ಹೂಗಾರ್, ಅಯ್ಯನಗೌಡ ಮಾಲಿ ಪಾಟೀಲ್, ಮಲ್ಲಿಕಾರ್ಜುನ ಮಲ್ಕಾಪುರ, ಮಲ್ಲಿಕಾರ್ಜುನ ಬೆನ್ನಕನ್, ಯಂಕನಗೌಡ ಮಾಲಿ ಪಾಟೀಲ್, ಯಲ್ಲನಗೌಡ ಬೆನ್ನಕನ್, ಗುರುನಾಥ ರೆಡ್ಡಿ ಕಮತಿಗೆ, ಭೀಮಗೌಡ ಮಾಲಿ ಪಾಟೀಲ್, ಶರಣಗೌಡ ಬೆನಕನ್, ಮಂಜುನಾಥ ಮಲ್ಕಾಪುರ, ಶಿವರೆಡ್ಡಿ ಗಣೇಕಲ್, ಕೊಳಪ್ಪ ದೇಸಾಯಿ, ತಿರುಪತಿ ಹುನಗುಂದವಾಡ, ಮಲ್ಲಣ್ಣ ಮಲ್ಕಾಪುರ, ತಿಮ್ಮಣ್ಣ ಕಾಕರಗಲ್, ಬುಡ್ಡಪ್ಪ ಅಸರಾತಿ, ಶಿವಪ್ಪ ವಟಗಲ್ಲ, ಭೈರಪ್ಪ ಜಮ್ಮಲದಿನ್ನಿ, ಮಾಜಿ ಸದಸ್ಯ ಕರಿಯಪ್ಪ ಜಮಲದಿನ್ನಿ, ಸುರೇಶ್ ನಾಯಕ ಅಸರಾತಿ, ಹನುಮಂತ ರೆಡ್ಡಿ ಅಸರಾತಿ, ಇಮಾಮ್ ಸಾಬ್ ನದಾಫ್ ದೊಡ್ಮನಿ, ರಾಜಸಾಬ್ ನದಾಫ್ ದೊಡ್ಮನಿ, ಗೋವಿಂದರೆಡ್ಡಿ ವಟಗಲ್ಲ, ಚಂದ್ರಮ ಅಸರಾತಿ, ಶಿವಪ್ಪ ನಾಯಕ ಸೇರಿದಂತೆ ಗ್ರಾಮದ ಮುಖಂಡರು, ಯುವಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.




# ಶ್ರೀ ಹುತ್ತಿನ ಉದ್ಭವ ಸೌದತ್ತಿ ಯಲ್ಲಮ್ಮ ದೇವಸ್ಥಾನದಲ್ಲಿ ಮಹಿಳೆಯರಿಂದ ಪಲ್ಲಕ್ಕಿ ಸೇವೆ

ರಾಯಚೂರು: ನಗರದ ಜ್ಯೋತಿ ಕಾಲೋನಿಯ ಅಲ್ಲಮಪ್ರಭು ಲೇಔಟ್‌ನಲ್ಲಿರುವ ಶ್ರೀ ಹುತ್ತಿನ ಉದ್ಭವ ಸೌದತ್ತಿ ಯಲ್ಲಮ್ಮ ದೇವಸ್ಥಾನದಲ್ಲಿ ಮುಂಬರುವ ಭಾರತ ಹುಣ್ಣಿಮೆಯ ಜಾತ್ರಾ ಮಹೋತ್ಸವದ ಅಂಗವಾಗಿ ಮಹಿಳಾ ಭಕ್ತರಿಂದ ಶ್ರೀ ಉದ್ಭವ ಯಲ್ಲಮ್ಮ ದೇವಿಯ ಪಲ್ಲಕ್ಕಿ ಸೇವೆ ಶ್ರದ್ಧಾಭಕ್ತಿಯಿಂದ ನೆರವೇರಿತು.



ದೇವಸ್ಥಾನದ ಸಂಸ್ಥಾಪಕ ಅಧ್ಯಕ್ಷೆ ರಾಜೇಶ್ವರಿ ವೆಂಕಟೇಶ ನಾಯಕ ಅವರ ನೇತೃತ್ವದಲ್ಲಿ ಶೀಗಿ ಹುಣ್ಣಿಮೆಯಿಂದ ಆರಂಭಿಸಿ ಮುಂದಿನ ಐದು ಹುಣ್ಣಿಮೆಗಳವರೆಗೆ ಪ್ರತಿ ತಿಂಗಳು ದೇವಸ್ಥಾನದ ಆವರಣದಲ್ಲಿ ಮಹಿಳೆಯರಿಂದ ವಿಶೇಷ ಪಲ್ಲಕ್ಕಿ ಸೇವೆ ನಡೆಸಲು ನಿರ್ಧರಿಸಲಾಗಿದ್ದು, ಅದರಂತೆ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು.

ದೇವಸ್ಥಾನದ ಪ್ರಧಾನ ಅರ್ಚಕ ವೇದಮೂರ್ತಿ ರಾಜಶೇಖರಯ್ಯ ಶಾಸ್ತ್ರಿಗಳ ಪೌರೋಹಿತ್ಯದಲ್ಲಿ ಶ್ರೀ ಉದ್ಭವ ಯಲ್ಲಮ್ಮ ದೇವಿಗೆ ರಾಜೇಶ್ವರಿ ಅಮ್ಮನವರು ಕುಂಕುಮಾರ್ಚನೆ ಸಲ್ಲಿಸಿದರು. ಬಳಿಕ ದೇವಿಯ ಉತ್ಸವ ಮೂರ್ತಿಯನ್ನು ಪುಷ್ಪಗಳಿಂದ ಅಲಂಕರಿಸಿದ ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ವಿಶೇಷ ಪೂಜೆ ನೆರವೇರಿಸಲಾಯಿತು.

ದೇವಸ್ಥಾನದ ಮಹಿಳಾ ಭಕ್ತರು ಪಲ್ಲಕ್ಕಿಯನ್ನು ಹೊತ್ತು ದೇವಸ್ಥಾನದ ಸುತ್ತ ಐದು ಪ್ರದಕ್ಷಿಣೆ ಹಾಕುವ ಮೂಲಕ ಪಲ್ಲಕ್ಕಿ ಸೇವೆಯಲ್ಲಿ ಪಾಲ್ಗೊಂಡರು. ನಂತರ ರಾಜೇಶ್ವರಿ ಅಮ್ಮನವರು ಶ್ರೀ ಉದ್ಭವ ಯಲ್ಲಮ್ಮ ದೇವಿಗೆ ಮಹಾಮಂಗಳಾರತಿ ಸಲ್ಲಿಸಿದರು. ದೇವಸ್ಥಾನದ ಮೂಲಸ್ಥಾನದಲ್ಲಿರುವ ತಾಯಮ್ಮ ದೇವಿಗೂ ವಿಶೇಷ ಪೂಜೆ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರಾಜೇಶ್ವರಿ ವೆಂಕಟೇಶ ನಾಯಕ, ಈ ವರ್ಷದ ಮಳೆ ಕೊರತೆಯಿಂದ ನಾಡಿನ ರೈತರು ಹಾಗೂ ಸಾರ್ವಜನಿಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಹಿಂಗಾರು ಹಂಗಾಮಿನಲ್ಲಾದರೂ ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ ಎಂದು ದೇವಿಯಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.

ಪ್ರತಿ ವರ್ಷದ ಸಂಪ್ರದಾಯದಂತೆ ಈ ಬಾರಿಯೂ ಪ್ರತಿ ಹುಣ್ಣಿಮೆಯಂದು ಪಲ್ಲಕ್ಕಿ ಸೇವೆ, ಕುಂಕುಮಾರ್ಚನೆ, ಮಹಾಮಂಗಳಾರತಿ ಹಾಗೂ ಮಹಾಪ್ರಸಾದ ವಿತರಣೆ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲಾಗುವುದು. ನಾಡಿನ ಜನತೆಗೆ ಉತ್ತಮ ಮಳೆ, ಸಮೃದ್ಧ ಬೆಳೆ ದೊರೆತು ಎಲ್ಲರೂ ಸುಖ, ಶಾಂತಿ, ಆರೋಗ್ಯ, ನೆಮ್ಮದಿ ಹಾಗೂ ಅಷ್ಟೈಶ್ವರ್ಯಗಳಿಂದ ಜೀವನ ನಡೆಸುವಂತಾಗಲಿ ಎಂದು ದೇವಿಯಲ್ಲಿ ಪ್ರಾರ್ಥಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಅರ್ಚಕ ವಿಜಯೇಂದ್ರ ಆಚಾರ, ಪದ್ಮಾವತಿ, ನಯನ, ಸುಮಂಗಲಮ್ಮ, ವಿಜಯಲಕ್ಷ್ಮೀ, ಶರಣಮ್ಮ, ಶಶಿಕಲಾ, ರಾಜೇಶ್ವರಿ, ಶಾಮಲಾ, ವೀಣಾ ಸೇರಿದಂತೆ ದೇವಸ್ಥಾನದ ಮಹಿಳಾ ಭಕ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ನಂದಿನಿ ಶಿಕ್ಷಣ ಸಂಸ್ಥೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ: ಮಾನವೀಯ ಮೌಲ್ಯಗಳ ಅಳವಡಿಕೆಗೆ ಕರೆ



ರಾಯಚೂರು: ಮಹರ್ಷಿ ವಾಲ್ಮೀಕಿ ಅವರ ಜೀವನವು ವ್ಯಕ್ತಿತ್ವ ಪರಿವರ್ತನೆಗೆ ಅತ್ಯುತ್ತಮ ಉದಾಹರಣೆಯಾಗಿದ್ದು, ಅವರು ರಾಮಾಯಣ ಮಹಾಕಾವ್ಯದ ಮೂಲಕ ಸಾರಿದ ಸತ್ಯ, ಧರ್ಮ, ತ್ಯಾಗ, ನಿಸ್ವಾರ್ಥ ಸೇವೆ ಹಾಗೂ ಮಾನವೀಯ ಮೌಲ್ಯಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ನಂದಿನಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ. ಆಲಿಸ್ ಈ. ಜೋಸೆಫ್ ಹೇಳಿದರು.

ನಗರದ ರಾಂಪುರದಲ್ಲಿರುವ ಡಾ. ನರಸಿಂಹಲು ನಂದಿನಿ ಸ್ಮಾರಕ ಶಿಕ್ಷಣ ಸಂಸ್ಥೆಯ ಆಶ್ರಯದಲ್ಲಿ ನಂದಿನಿ ಪೂರ್ವ ಪ್ರಾಥಮಿಕ, ಪ್ರಾಥಮಿಕ, ಪ್ರೌಢಶಾಲೆ, ಪದವಿಪೂರ್ವ ಕಾಲೇಜು ಹಾಗೂ ನಂದಿನಿ ಶಿಕ್ಷಣ ಮಹಾವಿದ್ಯಾಲಯದ ಸಂಯುಕ್ತ ಸಹಯೋಗದಲ್ಲಿ ಶಿಕ್ಷಣ ಮಹಾವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹರ್ಷಿ ವಾಲ್ಮೀಕಿ ಅವರು ಸಂಸ್ಕೃತ ಸಾಹಿತ್ಯದ ಆದಿಕವಿಯಾಗಿದ್ದು, ಜಗತ್ತಿಗೆ ರಾಮಾಯಣದಂತಹ ಮಹಾನ್ ಕಾವ್ಯವನ್ನು ಕೊಡುಗೆಯಾಗಿ ನೀಡಿದ್ದಾರೆ. ಅವರ ಜೀವನವು ಮನುಷ್ಯನಲ್ಲಿರುವ ಪರಿವರ್ತನೆಯ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ. ರತ್ನಾಕರನಾಗಿದ್ದ ವ್ಯಕ್ತಿ ನಾರದ ಮಹರ್ಷಿಗಳ ಮಾರ್ಗದರ್ಶನದಿಂದ ಜೀವನದಲ್ಲಿ ಬದಲಾವಣೆ ಕಂಡು, ಕಠಿಣ ತಪಸ್ಸು ಹಾಗೂ ಜ್ಞಾನಾರ್ಜನೆಯ ಮೂಲಕ ಮಹರ್ಷಿ ವಾಲ್ಮೀಕಿಯಾಗಿ ರೂಪುಗೊಂಡ ಕಥೆ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕವಾಗಿದೆ ಎಂದು ವಿವರಿಸಿದರು.

ರಾಮಾಯಣದಲ್ಲಿ ಹಿರಿಯರಿಗೆ ಗೌರವ ನೀಡುವುದು, ಸಚ್ಚಾರಿತ್ರ್ಯ, ಧೈರ್ಯ, ನಾಯಕತ್ವ, ಜವಾಬ್ದಾರಿ, ಪರಸ್ಪರ ಸಹಕಾರ ಹಾಗೂ ನಿಸ್ವಾರ್ಥ ಸೇವೆಯಂತಹ ಅನೇಕ ಜೀವನ ಮೌಲ್ಯಗಳನ್ನು ಪ್ರತಿಪಾದಿಸಲಾಗಿದೆ. ಇಂದಿನ ಸಮಾಜದಲ್ಲಿ ನೈತಿಕ ಮೌಲ್ಯಗಳ ಕೊರತೆ ಕಂಡುಬರುತ್ತಿದ್ದು, ಮಕ್ಕಳಿಗೆ ಬಾಲ್ಯದಿಂದಲೇ ಕುಟುಂಬ, ಶಾಲೆ ಮತ್ತು ಸಮಾಜದ ಮೂಲಕ ಉತ್ತಮ ಸಂಸ್ಕಾರ ಹಾಗೂ ಮಾನವೀಯ ಗುಣಗಳನ್ನು ಬೆಳೆಸುವುದು ಅಗತ್ಯವಾಗಿದೆ. ವಾಲ್ಮೀಕಿ ಅವರು ಕೇವಲ ಮಹಾಕವಿಯಲ್ಲದೆ, ವ್ಯಕ್ತಿತ್ವ ಪರಿವರ್ತನೆ ಮತ್ತು ಜ್ಞಾನದ ಸಂಕೇತವಾಗಿದ್ದಾರೆ ಎಂದು ಹೇಳಿದರು.

ಸಹಾಯಕ ಪ್ರಾಧ್ಯಾಪಕ ನರಸಿಂಹ ಹೊಸೂರು ಮಾತನಾಡಿ, ಮನುಷ್ಯನು ಕೇವಲ ದೈಹಿಕ ಬೆಳವಣಿಗೆಯಿಂದ ಶ್ರೇಷ್ಠನಾಗುವುದಿಲ್ಲ. ಸಂಸ್ಕಾರ, ಜ್ಞಾನ, ಅರಿವು ಹಾಗೂ ಮಾನವೀಯ ಗುಣಗಳನ್ನು ಬೆಳೆಸಿಕೊಂಡಾಗ ಮಾತ್ರ ಮಹಾಮಾನವನಾಗಿ ರೂಪುಗೊಳ್ಳಲು ಸಾಧ್ಯ. ಮಹರ್ಷಿ ವಾಲ್ಮೀಕಿ ಅವರ ಜೀವನದಲ್ಲಿ ಸಂಭವಿಸಿದ ಪರಿವರ್ತನೆಯು ಇದಕ್ಕೆ ಉತ್ತಮ ನಿದರ್ಶನವಾಗಿದೆ. ಪ್ರತಿಯೊಬ್ಬರೂ ತ್ಯಾಗ, ನಿಸ್ವಾರ್ಥತೆ, ಸಚ್ಚಾರಿತ್ರ್ಯ ಹಾಗೂ ಸಮಾಜಮುಖಿ ಚಿಂತನೆಗಳನ್ನು ರೂಢಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಪೂರ್ವ ಪ್ರಾಥಮಿಕ ಶಾಲೆಯ ಮುಖ್ಯಗುರು ವಂದನಾ, ಪ್ರಾಥಮಿಕ ಶಾಲೆಯ ಮುಖ್ಯಗುರು ಬಸವರಾಜೇಶ್ವರಿ ಸೇರಿದಂತೆ ಪ್ರೌಢಶಾಲೆ, ಪದವಿಪೂರ್ವ ಕಾಲೇಜು ಹಾಗೂ ಶಿಕ್ಷಣ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

ಸಹಾಯಕ ಪ್ರಾಧ್ಯಾಪಕಿ ಪರಿಮಳ ಸ್ವಾಗತಿಸಿದರು. ಉಪ ಪ್ರಾಚಾರ್ಯ ಡಾ. ಬಿ. ವಿಜಯ ರಾಜೇಂದ್ರ ಕಾರ್ಯಕ್ರಮ ನಿರ್ವಹಿಸಿದರು. ಸಹಾಯಕ ಪ್ರಾಧ್ಯಾಪಕ ಅಮರಾನಂದ ವಂದಿಸಿದರು.

## ನಂದಿನಿ ಶಿಕ್ಷಣ ಸಂಸ್ಥೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ: ಮಾನವೀಯ ಮೌಲ್ಯಗಳ ಅಳವಡಿಕೆಗೆ ಕರೆ

ದಾಸಸಾಹಿತ್ಯ ಭಕ್ತಿ ಮತ್ತು ಜ್ಞಾನದ ಅಮೂಲ್ಯ ಸಂಗಮ: ಶ್ರೀಪಾದರಾವ್ ಕುಲಕರ್ಣಿ



ರಾಯಚೂರು, ಅ. 26: ದಾಸಸಾಹಿತ್ಯವು ಕನ್ನಡ ನಾಡಿನ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯ ಅಮೂಲ್ಯ ಸಂಪತ್ತಾಗಿದ್ದು, ಭಕ್ತಿಯ ಸೌರಭದೊಂದಿಗೆ ಜ್ಞಾನದ ಬೆಳಕನ್ನು ಪಸರಿಸುವ ಮಹತ್ವದ ಸಾಹಿತ್ಯವಾಗಿದೆ ಎಂದು ಶ್ರೀ ತಬಲಾ ವಿದ್ಯಾಲಯದ ಸಂಗೀತ ಶಿಕ್ಷಕ ಶ್ರೀಪಾದರಾವ್ ಕುಲಕರ್ಣಿ ಲಕ್ಕಮದಿನ್ನಿ ಹೇಳಿದರು.

ನಗರದ ವಾಸವಿ ನಗರದಲ್ಲಿರುವ ಶ್ರೀ ತಬಲಾ ವಿದ್ಯಾಲಯದಲ್ಲಿ ಭಾನುವಾರ ಆಯೋಜಿಸಿದ್ದ ದಾಸವಾಣಿ ಹಾಗೂ ವಿದ್ಯಾರ್ಥಿಗಳ ತಬಲಾ ವಾದನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆ ಹರಿದಾಸ ಪರಂಪರೆಗೆ ಹೆಸರುವಾಸಿಯಾದ ನೆಲವಾಗಿದೆ. ದಾಸರು ತಮ್ಮ ಕೀರ್ತನೆಗಳು ಹಾಗೂ ಸಾಹಿತ್ಯದ ಮೂಲಕ ಭಕ್ತಿ, ಜ್ಞಾನ, ನೀತಿ ಮತ್ತು ಮಾನವೀಯ ಮೌಲ್ಯಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಮಹತ್ವದ ಕಾರ್ಯ ಮಾಡಿದ್ದಾರೆ. ದಾಸಸಾಹಿತ್ಯವು ಕೇವಲ ಭಕ್ತಿಗೀತೆಗಳಿಗೆ ಸೀಮಿತವಾಗದೆ, ಬದುಕಿಗೆ ಮಾರ್ಗದರ್ಶನ ನೀಡುವ ಸಂದೇಶಗಳನ್ನು ಒಳಗೊಂಡಿದೆ ಎಂದು ತಿಳಿಸಿದರು.

ಇಂದಿನ ಯುವಪೀಳಿಗೆಗೆ ದಾಸಸಾಹಿತ್ಯದ ಮಹತ್ವವನ್ನು ಪರಿಚಯಿಸುವುದು ಅಗತ್ಯವಾಗಿದೆ. ಸಂಗೀತದ ಮೂಲಕ ಮಕ್ಕಳಲ್ಲಿ ಶಿಸ್ತು, ಏಕಾಗ್ರತೆ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಬೆಳೆಸಬಹುದು. ಈ ನಿಟ್ಟಿನಲ್ಲಿ ಶ್ರೀ ತಬಲಾ ವಿದ್ಯಾಲಯವು ಸಂಗೀತ ಶಿಕ್ಷಣದ ಜೊತೆಗೆ ದಾಸಸಾಹಿತ್ಯದ ಪರಿಚಯ ಮಾಡಿಕೊಡುವ ಪ್ರಯತ್ನ ನಡೆಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ವಿದ್ಯಾಲಯದ ವಿದ್ಯಾರ್ಥಿಗಳು ತಬಲಾ ವಾದನ ಪ್ರದರ್ಶಿಸಿ ಗಮನ ಸೆಳೆದರು. ಬಳಿಕ ಕಲಾವಿದರ ತಂಡದಿಂದ ನಡೆದ ದಾಸವಾಣಿ ಕಾರ್ಯಕ್ರಮದಲ್ಲಿ ಹರಿದಾಸರ ಕೀರ್ತನೆಗಳನ್ನು ಪ್ರಸ್ತುತಪಡಿಸಲಾಯಿತು. ಸಂಗೀತ ಕಾರ್ಯಕ್ರಮದಲ್ಲಿ ಭಾಗವಹಿಸಿದ ಕಲಾವಿದರನ್ನು ಶ್ರೀಪಾದರಾವ್ ಕುಲಕರ್ಣಿ ಅಭಿನಂದಿಸಿದರು.

ದಾಸವಾಣಿ ಕಾರ್ಯಕ್ರಮದಲ್ಲಿ ಗಾಯಕರಾದ ಪ್ರಸನ್ನ ಕೀಲಿ, ವೆಂಕಟಲಕ್ಷ್ಮಿ, ತಬಲಾ ವಾದಕರಾದ ಪಾಂಡುರಂಗಾಚಾರ್ಯ ರಾಜಪುರೋಹಿತ್, ಮೃತ್ಯುಂಜಯ ಸ್ವಾಮಿ, ಶ್ರೀಧರ್ ಕುಲಕರ್ಣಿ, ಹಾರ್ಮೋನಿಯಂ ವಾದಕರಾಗಿ ಶ್ರೀಪಾದರಾವ್ ಕುಲಕರ್ಣಿ ಹಾಗೂ ತಾಳವಾದನದಲ್ಲಿ ರವಿ ಕುಲಕರ್ಣಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಪ್ರಕಾಶ್, ಪ್ರಶಾಂತ್, ರಮಕಾಂತ್, ರಾಘವೇಂದ್ರ, ಗೋಪಾಲ್ ಹಾಗೂ ಶ್ರೀ ತಬಲಾ ವಿದ್ಯಾಲಯದ ವಿದ್ಯಾರ್ಥಿಗಳಾದ ಚನ್ನವೀರಯ್ಯ ವಸ್ತದ್, ಶ್ರೀನಿಕೇತನ್ ಭಟ್, ಸಂಜೀತ್ ಗೋನಾಳ್, ಜೀತೇಂದ್ರ ದೇಸಾಯಿ, ವೈಭವಿ, ನರಸಿಂಹ ರಾಯ್ ಸೇರಿದಂತೆ ವಿದ್ಯಾರ್ಥಿಗಳ ಪಾಲಕರು ಉಪಸ್ಥಿತರಿದ್ದರು.

## ಮಹರ್ಷಿ ವಾಲ್ಮೀಕಿ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ: ನಾಗೇಂದ್ರ ಬಾಬು ಕುಮಾರ



ಲಿಂಗಸುಗೂರು: ಮಹರ್ಷಿ ವಾಲ್ಮೀಕಿ ಅವರ ಜೀವನ ಮತ್ತು ಸಾಧನೆ ಯುವಜನತೆಗೆ ಸ್ಫೂರ್ತಿದಾಯಕವಾಗಿದ್ದು, ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಹಾಯಕ ಆಯುಕ್ತ ನಾಗೇಂದ್ರ ಬಾಬು ಕುಮಾರ ಕರೆ ನೀಡಿದರು.

ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತದ ವತಿಯಿಂದ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಮಹರ್ಷಿ ವಾಲ್ಮೀಕಿ ಅವರು ಜಗತ್ತಿಗೆ ರಾಮಾಯಣದಂತಹ ಮಹಾಕಾವ್ಯವನ್ನು ನೀಡಿದ್ದಾರೆ. ರಾಮಾಯಣವು ಕೇವಲ ಧಾರ್ಮಿಕ ಗ್ರಂಥವಾಗಿರದೆ, ಮಾನವೀಯ ಮೌಲ್ಯಗಳು, ನೈತಿಕತೆ ಹಾಗೂ ಉತ್ತಮ ಜೀವನ ನಡೆಸಲು ಮಾರ್ಗದರ್ಶನ ನೀಡುವ ಮಹತ್ವದ ಕೃತಿಯಾಗಿದೆ ಎಂದು ಹೇಳಿದರು.

ಮಹರ್ಷಿ ವಾಲ್ಮೀಕಿ ಅವರ ಜೀವನ ಚರಿತ್ರೆಯು ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತದೆ. ಅವರ ಆದರ್ಶಗಳು ಇಂದಿನ ಯುವಪೀಳಿಗೆಗೆ ದಾರಿದೀಪವಾಗಿದ್ದು, ಸತ್ಯ, ಧರ್ಮ, ಮಾನವೀಯತೆ ಮತ್ತು ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಸತ್ಯಮ್ಮ, ಬಸವರಾಜ ರಜುಲಕಿಮಠ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಶರಣಪ್ಪ, ಸಮಾಜ ಕಲ್ಯಾಣಾಧಿಕಾರಿ ರವೀಂದ್ರ ಉಪ್ಪಾರ, ಅಮರೇಶ, ಹನುಮಂತ ಸೇರಿದಂತೆ ತಹಶೀಲ್ದಾರ್ ಕಚೇರಿಯ ಸಿಬ್ಬಂದಿ ಉಪಸ್ಥಿತರಿದ್ದರು.

## ಮಹರ್ಷಿವಾಲ್ಮೀಕಿಜಯಂತಿಆಚರಣೆ:ಆದರ್ಶಗಳನ್ನು ಅಳವಡಿಸಿಕೊಳ್ಳಲು ದುರುಗಪ್ಪ ಬಂಡೆಬಾವಿ ಕರೆ



ಲಿಂಗಸುಗೂರು: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಅವರು ರಚಿಸಿದ ರಾಮಾಯಣ ಮಹಾಕಾವ್ಯದ ಮೌಲ್ಯಗಳನ್ನು ಗೌರವಿಸುವುದರ ಜೊತೆಗೆ ಅವರ ಆದರ್ಶಗಳನ್ನು ಪ್ರತಿಯೊಂದು ಸಮಾಜದ ಜನರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಮಾಜದ ಮುಖಂಡ ದುರುಗಪ್ಪ ಬಂಡೆಬಾವಿ ಹೇಳಿದರು.

ಪಟ್ಟಣದ ಗಡಿಯಾರ ಚೌಕದಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದಲ್ಲಿ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಮಹರ್ಷಿ ವಾಲ್ಮೀಕಿ ಅವರು ರಾಮಾಯಣ ಮಹಾಕಾವ್ಯದ ಮೂಲಕ ಸಮಾಜಕ್ಕೆ ಸತ್ಯ, ಧರ್ಮ, ನ್ಯಾಯ ಹಾಗೂ ಮಾನವೀಯ ಮೌಲ್ಯಗಳ ಸಂದೇಶ ನೀಡಿದ್ದಾರೆ. ಅವರ ಚಿಂತನೆಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಕವಾಗಿದ್ದು, ಪ್ರತಿಯೊಬ್ಬರೂ ಸಮಾಜದ ಹಿತವನ್ನು ಕಾಪಾಡುವ ನಿಟ್ಟಿನಲ್ಲಿ ಶ್ರಮಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರು ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಅವರ ಜೀವನ ಮತ್ತು ಆದರ್ಶಗಳನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಸಮಾಜದ ಪ್ರಮುಖರಾದ ಶಿವಪ್ಪ ಹಾಲಬಾವಿ, ಮಾನಪ್ಪ ಕಸಬಾ ಲಿಂಗಸೂರು, ಬಾಬು ನಾಯಕ, ಹನುಮಂತ ನಾಯಕ, ಲಕ್ಷ್ಮಿ ಬಾರೇರ್ಕ, ಕುಮಾರ ರಾಮನ ಸಂರಕ್ಷಣಾ ಸಮಿತಿಯ ತಾಲೂಕು ಅಧ್ಯಕ್ಷರು, ಸೋಮಶೇಖರ್ ನಾಯಕ, ಕೃಷ್ಣ ನಾಯಕ, ರಾಜೇಶ್ ನಾಯಕ, ರಾಮ, ಅಶೋಕ್ ನಾಯಕ, ಹನುಮಂತಪ್ಪ ಗಲಗಿನದೊಡ್ಡಿ, ಬಸವರಾಜ ನಾಯಕ ಬೈಲಗುಡ್ಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಾಲ್ಮೀಕಿ ಯುವಕರ ಸಂಘದ ನಾಮಫಲಕ ಉದ್ಘಾಟನೆ: ಮಹರ್ಷಿಗಳ ಆದರ್ಶ ಪಾಲನೆಗೆ ರಾಜಾ ವೆಂಕಟಪ್ಪ ನಾಯಕ ಕರೆ



ಮಾನ್ವಿ: ಪಟ್ಟಣದ ಯಂಕಪ್ಪ ತಾತನ ಮಠದ ನಮಾಜಗೇರಿಗುಡ್ಡದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ದೊರೆ ಅವರು ಮಹರ್ಷಿ ವಾಲ್ಮೀಕಿ ಯುವಕರ ಸಂಘದ ನಾಮಫಲಕವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಹರ್ಷಿ ವಾಲ್ಮೀಕಿ ಅವರ ಜೀವನ ಮತ್ತು ತತ್ವಾದರ್ಶಗಳು ಪ್ರತಿಯೊಬ್ಬರಿಗೂ ಮಾರ್ಗದರ್ಶಕವಾಗಿವೆ. ರಾಮಾಯಣ ಮಹಾಕಾವ್ಯದ ಮೂಲಕ ಸತ್ಯ, ಧರ್ಮ, ನ್ಯಾಯ ಹಾಗೂ ಮಾನವೀಯ ಮೌಲ್ಯಗಳ ಮಹತ್ವವನ್ನು ಸಾರಿದ ವಾಲ್ಮೀಕಿ ಅವರ ಚಿಂತನೆಗಳನ್ನು ಯುವಜನತೆ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಯುವಕರು ಸಂಘಟಿತರಾಗಿ ಸಮಾಜದ ಪ್ರಗತಿಗೆ ಶ್ರಮಿಸಬೇಕು. ಶಿಕ್ಷಣ, ಸಾಮಾಜಿಕ ಸಾಮರಸ್ಯ ಹಾಗೂ ಸಮುದಾಯದ ಅಭಿವೃದ್ಧಿಗೆ ಆದ್ಯತೆ ನೀಡುವ ಮೂಲಕ ಸಮಾಜಮುಖಿ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ರಾಜ್ಯ ಯುವ ಘಟಕದ ಉಪಾಧ್ಯಕ್ಷ ರಾಜಾ ರಾಮಚಂದ್ರ ನಾಯಕ ದೊರೆ, ತಾಲೂಕು ಅಧ್ಯಕ್ಷ ಈರಣ್ಣ ಮರ್ಲಟ್ಟಿ ಪೋತ್ನಾಳ್, ನಗರ ಘಟಕದ ಅಧ್ಯಕ್ಷ ಎಚ್. ಮೌನೇಶ್ ಗೌಡ, ತಾಲೂಕು ಪ್ರಧಾನ ಕಾರ್ಯದರ್ಶಿ ಪಿ. ರವಿಕುಮಾರ್ ವಕೀಲರು, ರೈತ ಘಟಕದ ತಾಲೂಕು ಅಧ್ಯಕ್ಷ ಶರಣಪ್ಪಗೌಡ ಮದ್ಲಾಪುರ, ಪರಿಶಿಷ್ಟ ಪಂಗಡ ಘಟಕದ ತಾಲೂಕು ಅಧ್ಯಕ್ಷ ವಿಜಯ ನಾಯಕ ಕೊಟ್ನೇಕಲ್, ಹಿರಿಯ ಮುಖಂಡ ಮೌಲಾಸಾಬ್, ಪುರಸಭೆ ಮಾಜಿ ಸದಸ್ಯ ಬಾಷಾ ಸಾಬ್, ಎಚ್.ಡಿ. ಹನುಮಗೌಡ ನಾಯಕ, ಮೌನೇಶ್ ನಾಯಕ ಹೀರಾ, ಬಸವ ಹೊಸಮನಿ, ಶಿವಾನಂದ ನಾಯಕ, ಯಲ್ಲಪ್ಪ ನಾಯಕ, ಜ್ಞಾನದೀಪ, ನಾಗರಾಜ ಪೆರಿಕಲ್, ಸಂತೋಷ್ ಹೂಗಾರ್, ಮಲ್ಲನಗೌಡ ಸಂಗಾಪುರ, ನಾಗೇಶ, ಶಿವರಾಜ, ಹನುಮಂತ್ರಾಯ, ಉಪ್ಪಾರ್ ನಾಗರಾಜ, ನಾಗರಾಜ ನಾಯಕ, ಶಿವಾನಂದ ನಾಯಕ, ಸಂಜೀವ ನಾಯಕ ಸೇರಿದಂತೆ ಯಂಕಪ್ಪ ತಾತನ ಮಠದ ಯುವ ಗೆಳೆಯರ ಬಳಗದ ಸದಸ್ಯರು, ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮಕ್ಕಳಲ್ಲಿ ನಾಯಕತ್ವ ಹಾಗೂ ಪ್ರಜಾಪ್ರಭುತ್ವದ ಅರಿವು ಮೂಡಿಸಲು ಕಾರ್ಯಾಗಾರ: ಫಾ. ಶಾಂತರಾಜ್



ಮಾನ್ವಿ: ಪಟ್ಟಣದ ಲೊಯೋಲಾ ಸಮಾಜ ಸೇವಾ ಕೇಂದ್ರದ ವತಿಯಿಂದ ಗ್ರಾಮೀಣ ಕಲಿಕಾ ಕೇಂದ್ರಗಳ ಮಕ್ಕಳಿಗೆ ಮಕ್ಕಳ ಸಂಸತ್ ರಚನೆ ಕುರಿತು ಕಾರ್ಯಾಗಾರ ಹಾಗೂ ತರಬೇತಿ ಕಾರ್ಯಕ್ರಮ ಆಯೋಜಿಸಲಾಯಿತು.

ಭಾರತದ ನಕ್ಷೆಯ ಮೇಲೆ ಸಂವಿಧಾನದ ಮೂಲ ಮೌಲ್ಯಗಳಾದ ಸ್ವಾತಂತ್ರ್ಯ, ನ್ಯಾಯ, ಏಕತೆ, ಸಮಾನತೆ ಹಾಗೂ ಭ್ರಾತೃತ್ವದ ಸಂದೇಶಗಳನ್ನು ಒಳಗೊಂಡ ಫಲಕಗಳನ್ನು ಅಂಟಿಸುವ ಮೂಲಕ ಲೊಯೋಲಾ ಸಮಾಜ ಸೇವಾ ಕೇಂದ್ರದ ಕ್ಷೇತ್ರಾಧಿಕಾರಿ ಫಾ. ಶಾಂತರಾಜ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಕ್ಕಳಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸುವುದು, ಪ್ರಜಾಪ್ರಭುತ್ವದ ತತ್ವಗಳನ್ನು ಪರಿಚಯಿಸುವುದು ಹಾಗೂ ಮಕ್ಕಳ ಹಕ್ಕುಗಳ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಬಾಲ್ಯದಿಂದಲೇ ಮಕ್ಕಳಿಗೆ ಜವಾಬ್ದಾರಿ, ಸಹಕಾರ ಮತ್ತು ನಿರ್ಧಾರ ತೆಗೆದುಕೊಳ್ಳುವ ಸಾಮರ್ಥ್ಯದ ಬಗ್ಗೆ ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಮಕ್ಕಳ ಸಂಸತ್ತಿನ ರಚನೆ, ಅದರ ಕಾರ್ಯವಿಧಾನ ಹಾಗೂ ಪದಾಧಿಕಾರಿಗಳ ಜವಾಬ್ದಾರಿಗಳ ಕುರಿತು ಮಾಹಿತಿ ನೀಡಲಾಯಿತು. ಮಕ್ಕಳ ಸಂಸತ್ತಿನ ಅಧ್ಯಕ್ಷರು, ಶಿಕ್ಷಣ, ಆರೋಗ್ಯ ಮತ್ತು ಸ್ವಚ್ಛತೆ, ಕ್ರೀಡೆ ಹಾಗೂ ಪರಿಸರ ಸೇರಿದಂತೆ ವಿವಿಧ ವಿಭಾಗಗಳ ಕಾರ್ಯಚಟುವಟಿಕೆಗಳನ್ನು ಪರಿಚಯಿಸಲಾಯಿತು.

ಮಕ್ಕಳು ತಮ್ಮ ಅಭಿಪ್ರಾಯಗಳನ್ನು ಮುಕ್ತವಾಗಿ ವ್ಯಕ್ತಪಡಿಸುವುದು, ಸಮಸ್ಯೆಗಳನ್ನು ಗುರುತಿಸುವುದು ಹಾಗೂ ಸಂಘಟಿತವಾಗಿ ಪರಿಹಾರ ಕಂಡುಕೊಳ್ಳುವ ಕುರಿತು ತರಬೇತಿಯಲ್ಲಿ ವಿವರಿಸಲಾಯಿತು.

ಕಾರ್ಯಕ್ರಮದಲ್ಲಿ ಪೋತ್ನಾಳದ ವಿಮುಕ್ತಿ ಚಾರಿಟೇಬಲ್ ಟ್ರಸ್ಟ್ ಸಂಯೋಜಕ ಜಯಶೀಲ ಹಾಗೂ ಲೊಯೋಲಾ ಸಮಾಜ ಸೇವಾ ಕೇಂದ್ರದ ಸಂಯೋಜಕ ಮರಿಯಪ್ಪ ಮಾತನಾಡಿದರು.

## ಆದಿಕವಿಯ ಆದರ್ಶಗಳು ಸಮಾಜಕ್ಕೆ ದಾರಿದೀಪ ಎಂದ ಶಾಸಕ ಹಂಪಯ್ಯ ನಾಯಕ



ಮಾನ್ವಿ: ಪಟ್ಟಣದ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಶಾಸಕ ಹಂಪಯ್ಯ ನಾಯಕ ಅವರು ಮಹರ್ಷಿ ವಾಲ್ಮೀಕಿ ಅವರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಹಂಪಯ್ಯ ನಾಯಕ, ಆದಿಕವಿ ಮಹರ್ಷಿ ವಾಲ್ಮೀಕಿ ಅವರು ತಮ್ಮ ಜೀವನದ ಆರಂಭದಲ್ಲಿ ಬೇಡರಾಗಿದ್ದು, ಕಠಿಣ ತಪಸ್ಸು, ದೃಢಸಂಕಲ್ಪ ಹಾಗೂ ಛಲದ ಮೂಲಕ ಮಹರ್ಷಿಯಾಗಿ ರೂಪುಗೊಂಡರು. ರಾಮಾಯಣದಂತಹ ಮಹಾಕಾವ್ಯವನ್ನು ರಚಿಸಿ ಸತ್ಯ, ಧರ್ಮ, ನ್ಯಾಯ ಹಾಗೂ ಆದರ್ಶ ಜೀವನದ ಮೌಲ್ಯಗಳನ್ನು ಜಗತ್ತಿಗೆ ಪರಿಚಯಿಸಿದರು ಎಂದು ಹೇಳಿದರು.

ಮಹರ್ಷಿ ವಾಲ್ಮೀಕಿ ಅವರು ತಮ್ಮ ಸಾಹಿತ್ಯ ಮತ್ತು ಜೀವನದ ಮೂಲಕ ಸಮಾಜದಲ್ಲಿನ ಅಜ್ಞಾನದ ಕತ್ತಲನ್ನು ದೂರ ಮಾಡಿ ಜ್ಞಾನದ ಬೆಳಕನ್ನು ಹರಿಸಿದ್ದಾರೆ. ಅವರ ತತ್ವಾದರ್ಶಗಳು ಇಂದಿನ ಪೀಳಿಗೆಗೂ ಮಾರ್ಗದರ್ಶಕವಾಗಿದ್ದು, ಪ್ರತಿಯೊಬ್ಬರೂ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಜಯಂತಿ ಅಂಗವಾಗಿ ವಾಲ್ಮೀಕಿ ಸಮಾಜದ ಯುವಕರು ಪಟ್ಟಣದಲ್ಲಿ ಬೈಕ್ ರ್ಯಾಲಿ ನಡೆಸಿ ಸಂಭ್ರಮಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಗಂಗಾಧರ ನಾಯಕ, ರಾಜಾ ವೆಂಕಟಪ್ಪ ನಾಯಕ, ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ರಾಜಾ ಸುಭಾಷ್ ಚಂದ್ರ ನಾಯಕ, ಲಕ್ಷ್ಮಿದೇವಿ ನಾಯಕ, ಎಚ್. ಮೌನೇಶ್ ಗೌಡ, ಜಿ. ನಾಗರಾಜ್, ಹನುಮೇಶ್ ನಾಯಕ ಸದಾಪುರ, ಸತ್ತಾರ್ ಬಂಗ್ಲೆವಾಲೆ, ಹನುಮಂತರಾಯ ನಾಯಕ, ರಾಮಣ್ಣ ನಾಯಕ ಸೇರಿದಂತೆ ವಾಲ್ಮೀಕಿ ಸಮಾಜದ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## 371ಜೆ ವ್ಯಾಪ್ತಿ ವಿಸ್ತರಣೆಗೆ ವಿಜಯೇಂದ್ರ ಬೆಂಬಲ ಖಂಡನೀಯ: ಡಾ. ರಝಾಕ ಉಸ್ತಾದ



ರಾಯಚೂರು, ಅ. 26: ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸಂವಿಧಾನದ ಅನುಚ್ಛೇದ 371ಜೆ ಅಡಿಯಲ್ಲಿ ಕಲ್ಪಿಸಿರುವ ವಿಶೇಷ ಸೌಲಭ್ಯಗಳನ್ನು ಇತರ ಜಿಲ್ಲೆಗಳಿಗೂ ವಿಸ್ತರಿಸುವ ಪ್ರಯತ್ನಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಬಲ ವ್ಯಕ್ತಪಡಿಸಿರುವುದು ಕಲ್ಯಾಣ ಕರ್ನಾಟಕದ ಜನತೆಗೆ ಮಾಡುತ್ತಿರುವ ಅನ್ಯಾಯವಾಗಿದೆ ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ರಾಜ್ಯ ಉಪಾಧ್ಯಕ್ಷ ಡಾ. ರಝಾಕ ಉಸ್ತಾದ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಇತ್ತೀಚೆಗೆ ವಿಜಯಪುರ ಜಿಲ್ಲೆಯ ಸಿಂದಗಿ ತಾಲ್ಲೂಕಿಗೆ ಭೇಟಿ ನೀಡಿದ್ದ ವಿಜಯೇಂದ್ರ ಅವರು, ವಿಜಯಪುರ ಜಿಲ್ಲೆಯನ್ನು 371ಜೆ ವ್ಯಾಪ್ತಿಗೆ ಸೇರಿಸುವಂತೆ ನಡೆಯುತ್ತಿರುವ ಹೋರಾಟದ ವೇದಿಕೆಯಲ್ಲಿ ಭಾಗವಹಿಸಿ, ಬೇಡಿಕೆಗೆ ಬೆಂಬಲ ನೀಡುವುದಾಗಿ ಹಾಗೂ ಸರ್ಕಾರದ ಮೇಲೆ ಒತ್ತಡ ಹೇರುವುದಾಗಿ ಹೇಳಿರುವುದು ಖಂಡನೀಯ ಎಂದು ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸುವ ಉದ್ದೇಶದಿಂದ ಅನುಚ್ಛೇದ 371ಜೆ ಜಾರಿಗೆ ತರಲಾಗಿದೆ. ಈ ಪ್ರದೇಶದ ಐತಿಹಾಸಿಕ ಹಿನ್ನೆಲೆ, ಸಾಮಾಜಿಕ ಮತ್ತು ಶೈಕ್ಷಣಿಕ ಪರಿಸ್ಥಿತಿಯನ್ನು ಪರಿಗಣಿಸಿ ವಿಶೇಷ ಸೌಲಭ್ಯಗಳನ್ನು ಒದಗಿಸಲಾಗಿದೆ. ಇಂತಹ ಸೌಲಭ್ಯಗಳನ್ನು ಇತರ ಪ್ರದೇಶಗಳಿಗೂ ವಿಸ್ತರಿಸಲು ಮುಂದಾಗುವುದು ಮೂಲ ಉದ್ದೇಶಕ್ಕೆ ಧಕ್ಕೆಯುಂಟುಮಾಡುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಈ ಹಿಂದೆ ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ 371ಜೆ ತಿದ್ದುಪಡಿ ಸಾಧ್ಯವಿಲ್ಲ ಎಂದು ಹೇಳಲಾಗಿತ್ತು. ಇದೀಗ ಅದೇ ಪಕ್ಷದ ರಾಜ್ಯಾಧ್ಯಕ್ಷರು ವಿಜಯಪುರ ಜಿಲ್ಲೆಯನ್ನು ಈ ವ್ಯಾಪ್ತಿಗೆ ಸೇರಿಸುವುದಾಗಿ ಭರವಸೆ ನೀಡುತ್ತಿರುವುದು ವಿರೋಧಾಭಾಸದ ನಿಲುವಾಗಿದೆ ಎಂದು ಟೀಕಿಸಿದ್ದಾರೆ.

ರಾಜ್ಯದ ಇತರ ಪ್ರದೇಶಗಳಿಗೆ ವಿಶೇಷ ಸೌಲಭ್ಯಗಳ ಅಗತ್ಯವಿದ್ದರೆ ಸಂವಿಧಾನದ ಅನುಚ್ಛೇದ 371ರ ಅಡಿಯಲ್ಲಿ ಪ್ರತ್ಯೇಕ ತಿದ್ದುಪಡಿ ಮೂಲಕ 371ಕೆ ಅಥವಾ 371ಎಲ್‌ನಂತಹ ಹೊಸ ವ್ಯವಸ್ಥೆ ಕಲ್ಪಿಸಲು ಪ್ರಯತ್ನಿಸಲಿ. ಆದರೆ ಕಲ್ಯಾಣ ಕರ್ನಾಟಕಕ್ಕೆ ಈಗಾಗಲೇ ದೊರೆತಿರುವ ವಿಶೇಷ ಸ್ಥಾನಮಾನದ ವ್ಯಾಪ್ತಿಯನ್ನು ವಿಸ್ತರಿಸಲು ಮುಂದಾಗಬಾರದು ಎಂದು ಒತ್ತಾಯಿಸಿದ್ದಾರೆ.

371ಜೆ ಅಡಿಯಲ್ಲಿ ಕಲ್ಯಾಣ ಕರ್ನಾಟಕದ ವಿದ್ಯಾರ್ಥಿಗಳಿಗೆ ವೈದ್ಯಕೀಯ ಮತ್ತು ಎಂಜಿನಿಯರಿಂಗ್ ಶಿಕ್ಷಣದಲ್ಲಿ ವಿಶೇಷ ಅವಕಾಶಗಳು, ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಅನುದಾನ ಸೇರಿದಂತೆ ಹಲವು ಸೌಲಭ್ಯಗಳು ದೊರೆಯುತ್ತಿವೆ. ರಾಜ್ಯ ಸರ್ಕಾರದಿಂದ ಮಂಡಳಿಗೆ ₹5,000 ಕೋಟಿ ಅನುದಾನ ಒದಗಿಸಲಾಗುತ್ತಿರುವ ಹಿನ್ನೆಲೆಯಲ್ಲಿ ಇತರ ಪ್ರದೇಶಗಳಲ್ಲಿಯೂ ಇದೇ ಸೌಲಭ್ಯಗಳಿಗೆ ಬೇಡಿಕೆ ಹೆಚ್ಚುತ್ತಿದೆ ಎಂದು ಹೇಳಿದ್ದಾರೆ.

ಈ ಹಿಂದೆ ಬಿ. ಶ್ರೀರಾಮುಲು ಅವರು ಮೊಳಕಾಲ್ಮೂರು ತಾಲ್ಲೂಕನ್ನು 371ಜೆ ವ್ಯಾಪ್ತಿಗೆ ಸೇರಿಸುವುದಾಗಿ ಹೇಳಿಕೆ ನೀಡಿದ್ದನ್ನು ಜನತೆ ಮರೆತಿಲ್ಲ. ಇದೀಗ ವಿಜಯೇಂದ್ರ ಅವರು ವಿಜಯಪುರ ಜಿಲ್ಲೆಯ ಬೇಡಿಕೆಗೆ ಬೆಂಬಲ ನೀಡುವ ಮೂಲಕ ಮತ್ತೊಮ್ಮೆ ಇದೇ ವಿಷಯವನ್ನು ಮುನ್ನೆಲೆಗೆ ತಂದಿದ್ದಾರೆ ಎಂದು ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕಕ್ಕೆ 371ಜೆ ಸ್ಥಾನಮಾನ ದೊರೆತಿರುವುದು ದೀರ್ಘಕಾಲದ ಹೋರಾಟದ ಫಲವಾಗಿದೆ. ಅದರ ಐತಿಹಾಸಿಕ ಹಿನ್ನೆಲೆ ಹಾಗೂ ಉದ್ದೇಶವನ್ನು ಅರಿತು ರಾಜಕೀಯ ನಾಯಕರು ಹೇಳಿಕೆ ನೀಡಬೇಕು. ಈ ವಿಷಯದಲ್ಲಿ ವಿಜಯೇಂದ್ರ ಅವರು ತಮ್ಮ ನಿಲುವನ್ನು ಮರುಪರಿಶೀಲಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಳೆದ ಲೋಕಸಭಾ ಚುನಾವಣೆಯಲ್ಲಿ ಕಲ್ಯಾಣ ಕರ್ನಾಟಕದ ಐದು ಕ್ಷೇತ್ರಗಳಲ್ಲಿಯೂ ಬಿಜೆಪಿ ಸೋಲು ಅನುಭವಿಸಿದೆ ಎಂದು ಉಲ್ಲೇಖಿಸಿರುವ ಅವರು, ಪ್ರದೇಶದ ಹಿತಾಸಕ್ತಿಗೆ ವಿರುದ್ಧವಾದ ನಿಲುವು ಮುಂದುವರಿದರೆ ಜನರಿಂದ ಮತ್ತಷ್ಟು ವಿರೋಧ ಎದುರಾಗಲಿದೆ ಎಂದು ಎಚ್ಚರಿಸಿದ್ದಾರೆ.

371ಜೆ ವಿಶೇಷ ಸ್ಥಾನಮಾನದ ವಿಚಾರದಲ್ಲಿ ಕಲ್ಯಾಣ ಕರ್ನಾಟಕದ ಜನರ ಹಿತಾಸಕ್ತಿಗೆ ಧಕ್ಕೆಯಾಗುವ ಯಾವುದೇ ಪ್ರಯತ್ನವನ್ನು ಸಹಿಸುವುದಿಲ್ಲ. ಇಂತಹ ಹೇಳಿಕೆಗಳು ಮುಂದುವರಿದರೆ ವಿಜಯೇಂದ್ರ ವಿರುದ್ಧ ವಿವಿಧೆಡೆ ಪ್ರತಿಭಟನೆ ನಡೆಸಲಾಗುವುದು ಎಂದು ಡಾ. ರಝಾಕ ಉಸ್ತಾದ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ವಾಲ್ಮೀಕಿ ಆದರ್ಶಗಳನ್ನು ಅಳವಡಿಸಿಕೊಂಡು ಜನತೆಗೆ ನಿಸ್ವಾರ್ಥ ಆರೋಗ್ಯ ಸೇವೆ ಒದಗಿಸಿ: ಡಾ. ನಂದಿತಾ ಎಂ.ಎನ್.

ರಾಯಚೂರು, ಅ.26: ಮಹರ್ಷಿ ವಾಲ್ಮೀಕಿ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಆರೋಗ್ಯ ಇಲಾಖೆಯ ಸೇವೆ ಮತ್ತು ಸೌಲಭ್ಯಗಳನ್ನು ಸಾರ್ವಜನಿಕರಿಗೆ ನಿಸ್ವಾರ್ಥ ಮನೋಭಾವದಿಂದ ಒದಗಿಸುವ ಮೂಲಕ ವಾಲ್ಮೀಕಿ ಜಯಂತಿಯನ್ನು ಸಾರ್ಥಕಗೊಳಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಕರೆ ನೀಡಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ಆಯೋಜಿಸಿದ್ದ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ವಾಲ್ಮೀಕಿ ಅವರ ಭಾವಚಿ



ಭಾರತೀಯ ಸಾಹಿತ್ಯ ಮತ್ತು ಸಂಸ್ಕೃತಿಗೆ ... ರಚಿಸಿದ ರಾಮಾಯಣ ಮಹಾಕಾವ್ಯವು ಅನೇಕ ತಲೆಮಾರುಗಳಿಂದ ಮಾನವ ಸಮಾಜಕ್ಕೆ ನೈತಿ... ನೀಡುತ್ತ ಬಂದಿದೆ. ವಾಲ್ಮೀಕಿ ಜಯಂತಿ ಕೇವಲ ಆಚರಣೆಗೆ ಸೀಮಿತವಾಗದೆ ಜ್ಞಾನ, ಸಮಾನ... ಮಾಜದಲ್ಲಿ ಬೆಳೆಸುವ ಸಂಕಲ್ಪದ ದಿನವಾಗಬೇಕು ಎಂದು ಹೇಳಿದರು.

ಸರ್ಕಾರಿ ಆಸ್ಪತ್ರೆಗಳಿಗೆ ಚಿಕಿತ್ಸೆಗಾಗಿ ಆಗ... ರು ಹಾಗೂ ಆರೋಗ್ಯ ಸಿಬ್ಬಂದಿ ಸೌಜನ್ಯದಿಂದ ಸ್ಪಂದಿಸಬೇಕು. ವಿಶೇಷವಾಗಿ ತಾಯಿ ಮತ್ತು ಮಗುವಿನ ಆರೋಗ್ಯ ಸೇವೆ ಸೇರಿದಂತೆ ಇಲಾಖೆಯ ಎಲ್ಲ ಸೌಲಭ್ಯಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಜನರಿಗೆ ತಲುಪಿಸಲು ಶ್ರಮಿಸಬೇಕು. ಆರೋಗ್ಯ ಸೇವೆಯಲ್ಲಿ ಕರ್ತವ್ಯನಿಷ್ಠೆ, ಸಮರ್ಪಣಾ ಭಾವ ಹಾಗೂ ಮಾನವೀಯ ದೃಷ್ಟಿಕೋನ ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು.

ಆರೋಗ್ಯ ಇಲಾಖೆಯ ಪ್ರತಿಯೊಬ್ಬ ಸಿಬ್ಬಂದಿಯೂ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಉತ್ತಮ ಆರೋಗ್ಯ ಸೇವೆ ಒದಗಿಸಲು ಮುಂದಾಗಬೇಕು. ಮಹರ್ಷಿ ವಾಲ್ಮೀಕಿ ಅವರು ಸಾರಿದ ಮಾನವೀಯ ಮೌಲ್ಯಗಳನ್ನು ವೃತ್ತಿ ಜೀವನದಲ್ಲಿಯೂ ಅಳವಡಿಸಿಕೊಂಡಾಗ ಮಾತ್ರ ಅವರ ಜಯಂತಿ ಆಚರಣೆಗೆ ನಿಜವಾದ ಅರ್ಥ ದೊರೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಗಣೇಶ್ ಕೆ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಇಲಾಖೆಯ ಸಿಬ್ಬಂದಿಗಳಾದ ಎಎಸ್ಒ ಮಲ್ಲಿಕಾರ್ಜುನ, ಅಡಿವೆಪ್ಪ, ತಂಗಮ್ಮ, ಶರಣಬಸವ ಪಾಟೀಲ್, ಕನಕಾಚಲ ಪದಕಿ, ಮಹೇಶ್, ಮೃತ್ಯುಂಜಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಟ್ಟಿ ಚಿನ್ನದ ಗಣಿಯಲ್ಲಿ ವಿವಿಧೆಡೆ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ



ಹಟ್ಟಿ ಚಿನ್ನದ ಗಣಿ, ಅ. 26: ಪಟ್ಟಣದ ಶ್ರೀ ಮಹರ್ಷಿ ವಾಲ್ಮೀಕಿ ಕ್ಷೇಮಾಭಿವೃದ್ಧಿ ಸಂಘ, ಹಟ್ಟಿ ಚಿನ್ನದ ಗಣಿ ಕಂಪನಿಯ ಹಳೆ ಸಿಟಿ ಆಫೀಸ್ ಹಾಗೂ ಎಸ್‌ಸಿ-ಎಸ್‌ಟಿ ಸಂಘದ ವತಿಯಿಂದ ವಿವಿಧೆಡೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಜಯಂತಿ ಅಂಗವಾಗಿ ವಾಲ್ಮೀಕಿ ಸಮಾಜದ ಮುಖಂಡರು, ಗಣಿ ಕಂಪನಿಯ ಅಧಿಕಾರಿಗಳು ಹಾಗೂ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳು ಮಹರ್ಷಿ ವಾಲ್ಮೀಕಿ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಟ್ಟಿ ಚಿನ್ನದ ಗಣಿ ಸಿಬ್ಬಂದಿ ಹಾಗೂ ಕಾರ್ಮಿಕ ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಎಂ. ಶಫಿ, ಮಹನೀಯರ ಜಯಂತಿಗಳನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಅವರ ಆದರ್ಶಗಳು ಮತ್ತು ಜೀವನ ಸಂದೇಶಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಕೆಲಸವಾಗಬೇಕು. ಮಹರ್ಷಿ ವಾಲ್ಮೀಕಿ ಅವರು ತಮ್ಮ ಸಾಹಿತ್ಯದ ಮೂಲಕ ಸತ್ಯ, ಧರ್ಮ, ಮಾನವೀಯತೆ ಹಾಗೂ ನೈತಿಕ ಮೌಲ್ಯಗಳನ್ನು ಸಮಾಜಕ್ಕೆ ಸಾರಿದ್ದಾರೆ. ಅವರ ಚಿಂತನೆಗಳು ಇಂದಿನ ಸಮಾಜಕ್ಕೂ ದಾರಿದೀಪವಾಗಿವೆ ಎಂದು ಹೇಳಿದರು.

ಸಮಾಜದ ಮುಖಂಡ ಶಿವರಾಜಗೌಡ ಗುರಿಕಾರ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾದ ಮಹನೀಯರಲ್ಲ. ಇಡೀ ಮಾನವಕುಲಕ್ಕೆ ಮಾರ್ಗದರ್ಶನ ನೀಡಿದ ಮಹಾನ್ ದಾರ್ಶನಿಕರಾಗಿದ್ದಾರೆ. ರಾಮಾಯಣ ಮಹಾಕಾವ್ಯದ ಮೂಲಕ ಆದರ್ಶ ಬದುಕು, ಕುಟುಂಬದ ಜವಾಬ್ದಾರಿ, ಸಹಬಾಳ್ವೆ ಹಾಗೂ ಮಾನವೀಯ ಮೌಲ್ಯಗಳ ಮಹತ್ವವನ್ನು ತಿಳಿಸಿಕೊಟ್ಟಿದ್ದಾರೆ ಎಂದರು.

ಮಹರ್ಷಿ ವಾಲ್ಮೀಕಿಯವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರ ಸಾಹಿತ್ಯ ಮತ್ತು ಚಿಂತನೆಗಳನ್ನು ಯುವಪೀಳಿಗೆಗೆ ಪರಿಚಯಿಸುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಗಣಿ ಕಂಪನಿಯ ಪ್ರಭಾರಿ ಹಿರಿಯ ವ್ಯವಸ್ಥಾಪಕ (ಮಾಸ) ಯಮನೂರಪ್ಪ, ಕಾರ್ಮಿಕ ಮುಖಂಡ ಸಿದ್ದಪ್ಪ ಮುಂಡರಗಿ, ಎಸ್‌ಸಿ-ಎಸ್‌ಟಿ ಸಂಘದ ಅಧ್ಯಕ್ಷ ಜಮದಗ್ನಿ ಕೋಟಾ, ಶರಣಗೌಡ ಗುರಿಕಾರ, ಯಾಂಕೋಬ್ ಮಿಯ್ಯಾಪುರ, ಗ್ಯಾನಪ್ಪ, ಹನುಮಂತಗೌಡ, ಅಮರೇಶ ಬುದ್ಧಿನಿ, ನಾಗರಾಜ ನಾಯಕ, ಗುಂಡಪ್ಪಗೌಡ ಮಾಸ್ಟರ್, ಬಾಬು ಸಾಗರ, ಕುಪ್ಪಣ್ಣ, ಯಾಂಕೋಬ್ ಪೂಜಾರಿ, ಬಸವರಾಜಗೌಡ ಪೋ. ಪಾಟೀಲ್, ದಂಡಪ್ಪ, ಮಡಿವಾಳಪ್ಪಗೌಡ, ಜಡಿಯಪ್ಪ ಜಾಲಹಳ್ಳಿ, ರಾಮಣ್ಣ ಬೆಂಕಿ, ರಂಗನಾಥ, ರಂಗಪ್ಪ ಬುದ್ಧಿನಿ, ಮಾಲಪ್ಪ ಗಣೇಕಲ್, ಎಂ.ಸಿ. ಚಂದ್ರಶೇಖರ, ಅಂಜನೇಯಗೌಡ ಪೋ. ಪಾಟೀಲ್, ರಮೇಶ ಗಣೇಕಲ್, ಮಂಜುನಾಥ ಬೋಗರಮುಂಡಿ, ಮಾಲಪ್ಪ ಹೆಸರೂರು, ಧಣಿ ಬಿ.ಆರ್. ಗುಂಡ, ಕಿಚ್ಚ ರಾಮ, ಬುಜ್ಜ ನಾಯಕ, ಸುರೇಶಗೌಡ ಗುರಿಕಾರ, ಸುರೇಶ ನಾಯಕ, ಸಾಬಣ್ಣ, ರೆಬಲ್, ಚಂದ್ರಕಾಂತ, ಪಂಪಣ್ಣ, ಯಂಕೋಬ್ ಚಿಂಚರಕಿ ಸೇರಿದಂತೆ ಸಮಾಜದ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಕ್ರೀಡಾಮನೋಭಾವ ಅಗತ್ಯ: ರಾಜಶೇಖರ್




ಸಿಂಧನೂರು, ಅ. 26: ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸಿಕೊಂಡು ಕ್ರೀಡಾಸ್ಫೂರ್ತಿಯಿಂದ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು ಎಂದು ಸಿಂಧನೂರು ರೂರಲ್ ಸ್ಕೇಟಿಂಗ್ ಅಕಾಡೆಮಿಯ ಕಾರ್ಯದರ್ಶಿ ರಾಜಶೇಖರ್ ಹೇಳಿದರು.

ರಾಯಚೂರು ಜಿಲ್ಲಾ ಸ್ಪೀಡ್ ಸ್ಕೇಟಿಂಗ್ ಅಸೋಸಿಯೇಷನ್ ಹಾಗೂ ಸಿಂಧನೂರು ರೂರಲ್ ಸ್ಕೇಟಿಂಗ್ ಅಕಾಡೆಮಿ ಸಂಯುಕ್ತಾಶ್ರಯದಲ್ಲಿ ನಗರದ ಎಪಿಎಂಸಿ ಆವರಣದಲ್ಲಿ ಆಯೋಜಿಸಿದ್ದ ಜಿಲ್ಲಾಮಟ್ಟದ ಸ್ಪೀಡ್ ಸ್ಕೇಟಿಂಗ್ ಸ್ಪರ್ಧೆ ಹಾಗೂ ರಾಜ್ಯಮಟ್ಟದ ಆಯ್ಕೆ ಪ್ರಕ್ರಿಯೆಯಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಕ್ರೀಡಾ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಜಿಲ್ಲಾಮಟ್ಟದ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಕ್ರೀಡೆಗಳು ಮಕ್ಕಳಲ್ಲಿ ಶಿಸ್ತು, ಆತ್ಮವಿಶ್ವಾಸ, ಏಕಾಗ್ರತೆ ಹಾಗೂ ಸ್ಪರ್ಧಾತ್ಮಕ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ. ಪಾಲಕರು ತಮ್ಮ ಮಕ್ಕಳಿಗೆ ಪಠ್ಯ ಚಟುವಟಿಕೆಗಳ ಜೊತೆಗೆ ಕ್ರೀಡೆಗಳಲ್ಲಿಯೂ ಭಾಗವಹಿಸಲು ಉತ್ತೇಜನ ನೀಡಬೇಕು ಎಂದು ಸಲಹೆ ನೀಡಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ 60 ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿ ತಮ್ಮ ಕ್ರೀಡಾ ಸಾಮರ್ಥ್ಯ ಪ್ರದರ್ಶಿಸಿದರು. ರಾಜ್ಯಮಟ್ಟದ ಸ್ಪರ್ಧೆಗಳಿಗೆ ಪ್ರತಿಭಾವಂತ ಕ್ರೀಡಾಪಟುಗಳನ್ನು ಆಯ್ಕೆ ಮಾಡುವ ಉದ್ದೇಶದಿಂದ ನಡೆದ ಈ ಸ್ಪರ್ಧೆಯಲ್ಲಿ ಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಕ್ಕಳಿಗೆ ಪ್ರೋತ್ಸಾಹ ನೀಡಿದರು.

ಓಪನ್ ಚಾಂಪಿಯನ್‌ಶಿಪ್‌ನ ವಿವಿಧ ವಿಭಾಗಗಳಲ್ಲಿ ಸ್ಪರ್ಧಿಸಿದ ಕ್ರೀಡಾಪಟುಗಳು ಒಟ್ಟು 60 ಚಿನ್ನ, 30 ಬೆಳ್ಳಿ ಹಾಗೂ 35 ಕಂಚಿನ ಪದಕಗಳನ್ನು ಗಳಿಸಿದರು ಎಂದು ಆಯೋಜಕರು ತಿಳಿಸಿದರು.

ಕಾರ್ಯಕ್ರಮದಲ್ಲಿ ಕ್ರೀಡಾಪಟುಗಳಿಗೆ ಪದಕ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಿ ಮಾತನಾಡಿದ ಬಸವರಾಜ ನಾಡಗೌಡ, ವಿದ್ಯಾರ್ಥಿಗಳ ಜೀವನದಲ್ಲಿ ಶೈಕ್ಷಣಿಕ ಸಾಧನೆ ಎಷ್ಟು ಮುಖ್ಯವೋ ಕ್ರೀಡೆಗಳಲ್ಲಿನ ಆಸಕ್ತಿಯೂ ಅಷ್ಟೇ ಮುಖ್ಯವಾಗಿದೆ. ಕ್ರೀಡೆಯಲ್ಲಿ ತೊಡಗಿಸಿಕೊಳ್ಳುವುದರಿಂದ ದೈಹಿಕ ಸಾಮರ್ಥ್ಯದ ಜೊತೆಗೆ ಮಾನಸಿಕ ದೃಢತೆ ಹಾಗೂ ಏಕಾಗ್ರತೆ ಹೆಚ್ಚುತ್ತದೆ. ಇದು ಶೈಕ್ಷಣಿಕ ಪ್ರಗತಿಗೂ ಸಹಕಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮತ್ತೋರ್ವ ಅತಿಥಿ ಸೋಮನಗೌಡ ಬಾದರ್ಲಿ ಮಾತನಾಡಿ, ಸಿಂಧನೂರು ಭಾಗದಲ್ಲಿ ಸ್ಕೇಟಿಂಗ್ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಅಗತ್ಯವಿದೆ. ಮುಂದಿನ ದಿನಗಳಲ್ಲಿ ಸರ್ಕಾರದ ವತಿಯಿಂದ ಸುಸಜ್ಜಿತ ಸ್ಕೇಟಿಂಗ್ ಕ್ರೀಡಾಂಗಣ ನಿರ್ಮಾಣಕ್ಕೆ ಪ್ರಯತ್ನಿಸಲಾಗುವುದು. ಇಲ್ಲಿನ ಕ್ರೀಡಾಪಟುಗಳು ರಾಜ್ಯ ಹಾಗೂ ರಾಷ್ಟ್ರಮಟ್ಟದ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡುವ ಮೂಲಕ ಸಿಂಧನೂರಿಗೆ ಕೀರ್ತಿ ತರಬೇಕು ಎಂದು ಹಾರೈಸಿದರು.

ಸ್ಪರ್ಧೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಗಣ್ಯರು ಪದಕ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಸಿಂಧನೂರು ರೂರಲ್ ಸ್ಕೇಟಿಂಗ್ ಅಕಾಡೆಮಿಯ ಉಪಾಧ್ಯಕ್ಷ ಬಿ.ಜಿ. ವಟಗಲ್, ಖಜಾಂಚಿ ಗೀತಾ ಮೇಟಿ, ಕಾರ್ಯದರ್ಶಿ ರಾಜಶೇಖರ್, ಪಾಲಕರಾದ ಶಂಕರದೇವರು ಹಿರೇಮಠ, ಬಸವರಾಜ, ಸಂತೋಷ, ಶಮಶೋದ್ದೀನ್, ಹಿತೇಶ, ರಂಜಿತ್, ತಿಮ್ಮಣ್ಣ, ನಾಗರಾಜ, ರಾಜಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕುಮಾರಿ ಸಿಂಚನಾ ಪ್ರಾರ್ಥಿಸಿದರು. ರಾಜಪ್ಪ ಸ್ವಾಗತಿಸಿದರು. ಶಂಕರದೇವರು ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಚಂದ್ರು ವಂದಿಸಿದರು.

# ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ: ಆದಿಕವಿಗೆ ಗೌರವ ನಮನ



ದೇವದುರ್ಗ, ಅ.26: ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸೋಮವಾರ ಭಕ್ತಿಭಾವ ಹಾಗೂ ಗೌರವಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಮಾಜದ ಮುಖಂಡರು ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪನಮನ ಸಲ್ಲಿಸಿದರು. ಬಳಿಕ ಪಟ್ಟಣದ ಗೌರಂಪೇಟೆಯಲ್ಲಿರುವ ಮಹರ್ಷಿ ವಾಲ್ಮೀಕಿ ಅವರ ಪ್ರತಿಮೆಗೆ ಪೂಜೆ ಸಲ್ಲಿಸಿ ಗೌರವ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಮಹರ್ಷಿ ವಾಲ್ಮೀಕಿ ಅವರು ಭಾರತೀಯ ಸಾಹಿತ್ಯ, ಸಂಸ್ಕೃತಿ ಹಾಗೂ ಸಮಾಜಕ್ಕೆ ನೀಡಿದ ಅಪಾರ ಕೊಡುಗೆಯನ್ನು ಸ್ಮರಿಸಲಾಯಿತು. ಸಂಸ್ಕೃತ ಸಾಹಿತ್ಯದ ಆದಿಕವಿಯಾಗಿ ಗುರುತಿಸಿಕೊಂಡಿರುವ ವಾಲ್ಮೀಕಿ ಅವರು ರಚಿಸಿದ ರಾಮಾಯಣ ಮಹಾಕಾವ್ಯವು ಸತ್ಯ, ಧರ್ಮ, ತ್ಯಾಗ, ಕರ್ತವ್ಯನಿಷ್ಠೆ ಮತ್ತು ಮಾನವೀಯ ಮೌಲ್ಯಗಳ ಮಹತ್ವವನ್ನು ಸಾರುತ್ತದೆ.

ಪಾರಂಪರಿಕ ಕಥೆಗಳ ಪ್ರಕಾರ, ರತ್ನಾಕರನಾಗಿದ್ದ ವಾಲ್ಮೀಕಿ ಅವರು ನಾರದ ಮಹರ್ಷಿಗಳ ಉಪದೇಶದಿಂದ ಜೀವನದಲ್ಲಿ ಪರಿವರ್ತನೆ ಹೊಂದಿ ತಪಸ್ಸು ಹಾಗೂ ಆಧ್ಯಾತ್ಮಿಕ ಸಾಧನೆಯ ಮೂಲಕ ಮಹರ್ಷಿಯಾದರು. ಕ್ರೌಂಚ ಪಕ್ಷಿಯ ಸಾವಿನಿಂದ ಮರುಗಿದ ಅವರ ಹೃದಯದಿಂದ ಹೊರಹೊಮ್ಮಿದ ಶ್ಲೋಕವು ಸಂಸ್ಕೃತ ಕಾವ್ಯ ಪರಂಪರೆಯ ಮಹತ್ವದ ಆರಂಭವೆಂದು ಪರಿಗಣಿಸಲಾಗುತ್ತದೆ.

ಸುಮಾರು 24 ಸಾವಿರ ಶ್ಲೋಕಗಳು ಹಾಗೂ ಏಳು ಕಾಂಡಗಳನ್ನು ಒಳಗೊಂಡಿರುವ ರಾಮಾಯಣವು ಶ್ರೀರಾಮನ ಆದರ್ಶ ಜೀವನ, ಸೀತೆಯ ತ್ಯಾಗ, ಲಕ್ಷ್ಮಣನ ಸೇವಾಭಾವ ಮತ್ತು ಹನುಮಂತನ ಭಕ್ತಿಯ ಮೂಲಕ ಸಮಾಜಕ್ಕೆ ನೈತಿಕ ಮೌಲ್ಯಗಳ ಸಂದೇಶ ನೀಡಿದೆ. ವಾಲ್ಮೀಕಿ ಅವರ ಜೀವನವು ವ್ಯಕ್ತಿಯ ಪರಿವರ್ತನೆ, ಜ್ಞಾನ ಮತ್ತು ಸಾಧನೆಗೆ ಪ್ರೇರಣೆಯಾಗಿದೆ ಎಂಬ ಅಭಿಪ್ರಾಯ ವ್ಯಕ್ತವಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ವೈದ್ಯಾಧಿಕಾರಿ ಬನದೇಶ್, ಪುರಸಭೆ ಮುಖ್ಯಾಧಿಕಾರಿ ಹಂಪಯ್ಯ, ಕೃಷಿ ಇಲಾಖೆ ಅಧಿಕಾರಿ ಶ್ರೀನಿವಾಸ್ ನಾಯಕ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ರಾಜಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಬಾಬು ಹನುಮಂತ, ಪೊಲೀಸ್ ಇನ್‌ಸ್ಪೆಕ್ಟರ್ ಮಂಜುನಾಥ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಮಹೇಶ್ ನಾಯಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಮುಖಂಡರು, ಯುವಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ವಾಲ್ಮೀಕಿ ರಾಮಾಯಣ ಮಾನವ ಬದುಕಿಗೆ ದಾರಿದೀಪ:
## ಪ್ರೊ. ಶಿವಾನಂದ ಕೆಳಗಿನಮನಿ



ರಾಯಚೂರು, ಅ. 26: ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣವು ಕೇವಲ ಒಂದು ಮಹಾಕಾವ್ಯವಲ್ಲ. ಮಾನವ ಜೀವನದ ಆದರ್ಶಗಳು, ಕರ್ತವ್ಯ, ಧರ್ಮ ಮತ್ತು ನೈತಿಕ ಮೌಲ್ಯಗಳನ್ನು ತಿಳಿಸಿಕೊಡುವ ಜೀವನ ಮೀಮಾಂಸೆಯಾಗಿದೆ ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಿವಾನಂದ ಕೆಳಗಿನಮನಿ ಹೇಳಿದರು.

ನಗರದ ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಹರ್ಷಿಗಳ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಭಾರತೀಯ ಸಾಹಿತ್ಯ ಮತ್ತು ಸಂಸ್ಕೃತಿಯ ಇತಿಹಾಸದಲ್ಲಿ ಮಹರ್ಷಿ ವಾಲ್ಮೀಕಿ ಅವರಿಗೆ ವಿಶಿಷ್ಟ ಸ್ಥಾನವಿದೆ. ಸಂಸ್ಕೃತ ಸಾಹಿತ್ಯದ ಆದಿಕವಿ ಎನಿಸಿಕೊಂಡಿರುವ ಅವರು ರಚಿಸಿದ ರಾಮಾಯಣ ಮಹಾಕಾವ್ಯವು ಮಾನವ ಸಮಾಜಕ್ಕೆ ಸತ್ಯ, ಧರ್ಮ, ನೀತಿ ಮತ್ತು ಕರ್ತವ್ಯ ಪ್ರಜ್ಞೆಯ ಸಂದೇಶ ನೀಡಿದೆ. ವಾಲ್ಮೀಕಿ ಜಯಂತಿಯು ಭಾರತೀಯ ಸಾಹಿತ್ಯದ ಶ್ರೀಮಂತ ಪರಂಪರೆಯನ್ನು ಸ್ಮರಿಸುವ ಮಹತ್ವದ ದಿನವಾಗಿದೆ ಎಂದು ತಿಳಿಸಿದರು.

ಮಹರ್ಷಿ ವಾಲ್ಮೀಕಿಯವರ ಜೀವನವೇ ಮಾನವಕುಲಕ್ಕೆ ಸ್ಫೂರ್ತಿದಾಯಕವಾಗಿದೆ. ಕ್ರೌಂಚ ಪಕ್ಷಿಗಳ ಪ್ರಸಂಗದಿಂದ ಪ್ರೇರಣೆಗೊಂಡು, ನಾರದ ಮುನಿಗಳ ಮಾರ್ಗದರ್ಶನದಲ್ಲಿ ತಪಸ್ಸಿನ ಮೂಲಕ ಮಹರ್ಷಿಯಾಗಿ ರೂಪುಗೊಂಡ ಅವರ ಜೀವನವು ವ್ಯಕ್ತಿಯೊಬ್ಬ ತನ್ನ ತಪ್ಪುಗಳನ್ನು ತಿದ್ದಿಕೊಂಡು ಸಾಧನೆಯ ಶಿಖರಕ್ಕೇರಲು ಸಾಧ್ಯ ಎಂಬುದನ್ನು ಸಾರುತ್ತದೆ ಎಂದರು.

ರಾಮಾಯಣ ಮಹಾಕಾವ್ಯದಲ್ಲಿ ಪಿತೃವಾಕ್ಯ ಪರಿಪಾಲನೆ, ಕುಟುಂಬದ ಜವಾಬ್ದಾರಿ, ಸಹಬಾಳ್ವೆ, ನಿಷ್ಠೆ, ಭಕ್ತಿ, ನಂಬಿಕೆ, ಸಹನೆ ಮತ್ತು ತಾಳ್ಮೆಯಂತಹ ಜೀವನ ಮೌಲ್ಯಗಳನ್ನು ಪರಿಣಾಮಕಾರಿಯಾಗಿ ಚಿತ್ರಿಸಲಾಗಿದೆ. ಮನುಷ್ಯ ತನ್ನ ವೈಯಕ್ತಿಕ, ಕೌಟುಂಬಿಕ ಹಾಗೂ ಸಾಮಾಜಿಕ ಬದುಕಿನಲ್ಲಿ ಎದುರಿಸುವ ಸಂಕಷ್ಟಗಳಿಗೆ ರಾಮಾಯಣ ಮಾರ್ಗದರ್ಶನ ನೀಡುತ್ತದೆ. ಅಹಂಕಾರವು ವ್ಯಕ್ತಿಯ ಅವನತಿಗೆ ಕಾರಣವಾಗುತ್ತದೆ ಎಂಬ ಸಂದೇಶವನ್ನೂ ಈ ಕೃತಿ ನೀಡುತ್ತದೆ ಎಂದು ವಿವರಿಸಿದರು.

ರಾಮಾಯಣದ ಪ್ರಭಾವ ಭಾರತಕ್ಕೆ ಮಾತ್ರ ಸೀಮಿತವಾಗಿಲ್ಲ. ಆಗ್ನೇಯ ಏಷ್ಯಾ ಸೇರಿದಂತೆ ವಿಶ್ವದ ಹಲವು ರಾಷ್ಟ್ರಗಳ ಸಾಹಿತ್ಯ, ಸಂಸ್ಕೃತಿ, ಧಾರ್ಮಿಕ ಆಚರಣೆಗಳು ಮತ್ತು ಕಲಾ ಪರಂಪರೆಯ ಮೇಲೆಯೂ ಮಹತ್ವದ ಪ್ರಭಾವ ಬೀರಿದೆ. ಇಂತಹ ಮಹಾನ್ ಕೃತಿಯನ್ನು ಜಗತ್ತಿಗೆ ನೀಡಿದ ವಾಲ್ಮೀಕಿ ಮಹರ್ಷಿಗಳ ಆದರ್ಶಗಳನ್ನು ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳಲ್ಲಿ ಮಹರ್ಷಿ ವಾಲ್ಮೀಕಿಯವರ ಜೀವನ, ಸಾಹಿತ್ಯ ಹಾಗೂ ಚಿಂತನೆಗಳ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ವಿಶ್ವವಿದ್ಯಾಲಯದಲ್ಲಿ ಮುಂಬರುವ ದಿನಗಳಲ್ಲಿ ಒಂದು ದಿನದ ವಿಚಾರ ಸಂಕಿರಣ, ಪ್ರಬಂಧ ಸ್ಪರ್ಧೆ ಮತ್ತು ರಸಪ್ರಶ್ನೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮೌಲ್ಯಮಾಪನ ಕುಲಸಚಿವೆ ಪ್ರೊ. ಜ್ಯೋತಿ ಧಮ್ಮ ಪ್ರಕಾಶ್, ಹಣಕಾಸು ಅಧಿಕಾರಿ ಡಾ. ಸುಯಮೀಂದ್ರ ಕುಲಕರ್ಣಿ, ವಾಣಿಜ್ಯ ನಿಕಾಯದ ಡೀನ್ ಪ್ರೊ. ಪಿ. ಭಾಸ್ಕರ್ ಉಪಸ್ಥಿತರಿದ್ದರು.

ಉಪಕುಲಸಚಿವ ಡಾ. ವೆಂಕಟೇಶ್ ಕೆ. ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮ ನಿರೂಪಿಸಿದರು. ವಿಶ್ವವಿದ್ಯಾಲಯದ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ರಾಮಾಯಣದ ಮೂಲಕ ಆದರ್ಶ ಬದುಕಿನ ಸಂದೇಶ ಸಾರಿದ ಮಹರ್ಷಿ ವಾಲ್ಮೀಕಿ: ಭೀಮರಾಯ ರಾಮಸಮುದ್ರ




ಮಾನ್ವಿ, ಅ. 26: ಮಹರ್ಷಿ ವಾಲ್ಮೀಕಿ ಅವರು ರಾಮಾಯಣ ಮಹಾಕಾವ್ಯದ ಮೂಲಕ ಮಾನವ ಸಮಾಜಕ್ಕೆ ಸತ್ಯ, ಧರ್ಮ, ನ್ಯಾಯ ಹಾಗೂ ಆದರ್ಶ ಜೀವನದ ಮೌಲ್ಯಗಳನ್ನು ಪರಿಚಯಿಸಿದ್ದು, ಅವರ ಚಿಂತನೆಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಕವಾಗಿವೆ ಎಂದು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಹೇಳಿದರು.

ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ತಾಲೂಕು ಆಡಳಿತ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಸೋಮವಾರ ಆಯೋಜಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಹರ್ಷಿ ವಾಲ್ಮೀಕಿ ಅವರು ರಚಿಸಿದ ರಾಮಾಯಣವು ಭಾರತೀಯ ಸಾಹಿತ್ಯ ಪರಂಪರೆಯ ಶ್ರೇಷ್ಠ ಮಹಾಕಾವ್ಯಗಳಲ್ಲಿ ಒಂದಾಗಿದೆ. ಶ್ರೀರಾಮನ ಆದರ್ಶ ವ್ಯಕ್ತಿತ್ವ, ಕರ್ತವ್ಯನಿಷ್ಠೆ, ತ್ಯಾಗ, ಸಹನೆ ಹಾಗೂ ಧರ್ಮಪಾಲನೆಯಂತಹ ಮೌಲ್ಯಗಳನ್ನು ಈ ಕೃತಿಯ ಮೂಲಕ ಜಗತ್ತಿಗೆ ಪರಿಚಯಿಸಿದ್ದಾರೆ. ಮನುಷ್ಯ ಸಮಾಜದಲ್ಲಿ ಹೇಗೆ ಆದರ್ಶಪ್ರಾಯವಾಗಿ ಬದುಕಬೇಕು ಎಂಬುದರ ಜೊತೆಗೆ ನ್ಯಾಯ, ಸಮಾನತೆ ಮತ್ತು ಜನಕಲ್ಯಾಣದ ರಾಮರಾಜ್ಯದ ಪರಿಕಲ್ಪನೆಯನ್ನೂ ರಾಮಾಯಣ ತಿಳಿಸಿಕೊಡುತ್ತದೆ ಎಂದು ವಿವರಿಸಿದರು.

ಮಹರ್ಷಿ ವಾಲ್ಮೀಕಿಯವರ ಸಾಹಿತ್ಯ ಮತ್ತು ಜೀವನ ಸಂದೇಶಗಳು ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ. ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ತಾಲೂಕು ಮಟ್ಟದ ವಾಲ್ಮೀಕಿ ಶ್ರೀ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಖಾಲಿದ್ ಅಹಮ್ಮದ್, ಪೊಲೀಸ್ ಇನ್‌ಸ್ಪೆಕ್ಟರ್ ಸೋಮಶೇಖರ್ ಎಸ್. ಕೆಂಚರೆಡ್ಡಿ, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ, ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ಡಿ., ಪರಿಶಿಷ್ಟ ಪಂಗಡಗಳ ಕಲ್ಯಾಣಾಧಿಕಾರಿ ಭಾಗಯ್ಯ ನಾಯಕ, ತಾಲೂಕು ಆರೋಗ್ಯಾಧಿಕಾರಿ ಡಾ. ಶರಣಬಸವರಾಜು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K